# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 132 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 11–12–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 132 | RNI No: KARKAN/2023/88462 | Chitradurga | Date: 11-12-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಕ್ಕಳ ಆಯೋಗ ಸದಸ್ಯರಿಗೆ ಅಹವಾಲು ಸಲ್ಲಿಸಿದ ವಿದ್ಯಾರ್ಥಿಗಳು 2

ಶಾಂತಿಸಾಗರದಿಂದ ಕುಡಿಯುವ ನೀರನ್ನು ತರಲು ಸಹಾಯ ಮಾಡಿದ ವ್ಯಕ್ತಿ ಕೃಷ್ಣ 3

ಬೇರೊಬ್ಬರ ಹಕ್ಕಿಗೆ ಚ್ಯುತಿ ಬಾರದಂತೆ ಬದುಕುವುದೇ ಮಾನವ ಹಕ್ಕು ಪಾಲನೆ 4



ಸುದ್ದಿ, ಜಾಹಿರಾತಿಗೆ 9686622252





» **ಬೆಳಗಾವಿ ಸುವರ್ಣ ವಿಧಾನಸೌಧ**

ಡಿ.10 ರಂದು ಮುಂಜಾನೆ ನಿಧನರಾದ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ವಿಧಾನ ಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

ಬೆಳಗಾವಿ ಸುವರ್ಣ ಸೌಧದಲ್ಲಿ ಜರುಗುತ್ತಿರುವ ಚಳಿಗಾಲದ ಅಧಿವೇಶನದ ಎರಡನೆ ದಿನವಾದ ಮಂಗಳವಾರ ಸಭಾಧ್ಯಕ್ಷರಾದ ಯು.ಟಿ.ಖಾದರ್ ಸಂತಾಪ ಸೂಚನೆ ನಿರ್ಣಯವನ್ನು ಮಂಡಿಸಿ ಚರ್ಚೆಗೆ ಅವಕಾಶ ನೀಡಿದರು.

ಈ ವೇಳೆ ಮಾತನಾಡಿದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು, ಎಸ್.ಎಂ. ಕೃಷ್ಣಅವರು 01.05.1932 ರಂದು ಮದ್ದೂರು ತಾಲ್ಲೂಕಿನ ಸೋಮನಹಳ್ಳಿಯಲ್ಲಿ ಜನಿಸಿದ್ದರು. ಬಿ.ಎ. ಬಿ.ಎಲ್. ಪದವಿ ಪಡೆದಿದ್ದ ಅವರು ನಂತರ ಟೆಕ್ಸಾಸ್‌ನಲ್ಲಿ ಎಂ.ಸಿ.ಎಲ್. ಪದವಿ, ವಾಷಿಂಗ್ಟನ್ ವಿಶ್ವವಿದ್ಯಾಲಯದ ಲಾ ಸ್ಕೂಲ್‌ನಿಂದಲೂ ಪದವಿ ಪಡೆದಿದ್ದರು. ವೃತ್ತಿಯಲ್ಲಿ ವಕೀಲರಾಗಿದ್ದ ಎಸ್.ಎಂ.ಕೃಷ್ಣ ಅವರು ಕಾನೂನು ಕಾಲೇಜಿನಲ್ಲಿ ಪ್ರೊಫೆಸರ್ ಆಗಿಯೂ ಕಾರ್ಯನಿರ್ವಹಿಸಿದ್ದರು. 1962ರಲ್ಲಿ ಪ್ರಥಮ ಬಾರಿಗೆ ವಿಧಾನಸಭೆಗೆ ಆಯ್ಕೆಯಾಗಿದ್ದ ಅವರು ನಂತರ 1989ರಲ್ಲಿ 9ನೇ ವಿಧಾನಸಭೆಗೆ 1999 ರಲ್ಲಿ 11ನೇ ವಿಧಾನಸಭೆಗೆ ಹಾಗೂ 2004ರಲ್ಲಿ 12ನೇ ವಿಧಾನಸಭೆಗೆ ಪುನರಾಯ್ಕೆಗೊಂಡಿದ್ದರು. 1968ರಲ್ಲಿ 4ನೇ ಲೋಕಸಭೆಗೆ ಚುನಾಯಿತರಾಗಿದ್ದ ಅವರು 1971ರಲ್ಲಿ 5ನೇ ಲೋಕಸಭೆಗೆ, 1980 ರಲ್ಲಿ ಏಳನೇ ಲೋಕಸಭೆಗೆ ಪುನರಾಯ್ಕೆಗೊಂಡಿದ್ದರು. ನಂತರ ಅವರು 1972ರಲ್ಲಿ ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಗೊಂಡಿದ್ದು, 1996 ರಿಂದ 1999 ಮತ್ತು 2008 ರಿಂದ 2014ರ ಅವಧಿಯಲ್ಲಿ ರಾಜ್ಯಸಭಾ ಸದಸ್ಯರಾಗಿಯೂ ಕಾರ್ಯನಿರ್ವಹಿಸಿದ್ದರು ಎಂದು ಸದನಕ್ಕೆ ತಿಳಿಸಿದರು.

ಉಪ ಮುಖ್ಯಮಂತ್ರಿಯಾಗಿ ಹಾಗೂ ನಂತರ ರಾಜ್ಯದ 10ನೇ ಮುಖ್ಯಮಂತ್ರಿಯಾಗಿ ಎಸ್.ಎಂ.ಕೃಷ್ಣ ಸೇವೆ ಸಲ್ಲಿಸಿದ್ದರು. ಕೇಂದ್ರ ಕೈಗಾರಿಕೆ ರಾಜ್ಯ ಸಚಿವರಾಗಿ, ಹಣಕಾಸು ಖಾತೆಯ ರಾಜ್ಯ ಸಚಿವರಾಗಿ ಹಾಗೂ ವಿದೇಶಾಂಗ ವ್ಯವಹಾರಗಳ ಖಾತೆ ಸಚಿವರಾಗಿಯೂ ಸಹ ಕಾರ್ಯನಿರ್ವಹಿಸಿದ್ದರು. 2008ರಲ್ಲಿ ಮಹಾರಾಷ್ಟ್ರ ರಾಜ್ಯದ 18ನೇ ರಾಜ್ಯಪಾಲರಾಗಿ ನೇಮಕಗೊಂಡಿದ್ದರು.

ರಾಜ್ಯದ ಸರ್ವತೋಮುಖ ಅಭಿವೃದ್ಧಿಯ ಕನಸು ಕಂಡಿದ್ದ ಅವರು ಭೂ ದಾಖಲೆಗಳನ್ನು ಡಿಜಿಲೀಕರಣಗೊಳಿಸುವ ಭೂಮಿ ಯೋಜನೆ, ಸರ್ಕಾರಿ ಮಕ್ಕಳಿಗೆ ಬಿಸಿಯೂಟ ಯೋಜನೆ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು– ಮೈಸೂರು ಹೆದ್ದಾರಿ ಯೋಜನೆ ಸೇರಿದಂತೆ ಹತ್ತು ಹಲವಾರು ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತಂದಿದ್ದರು. ಮಾಹಿತಿ ಮತ್ತು ತಂತ್ರಜ್ಞಾನಕ್ಕೆ ಹೆಚ್ಚಿನ ಒತ್ತುಕೊಟ್ಟಿದ್ದ ಅವರು ರಾಜ್ಯದಲ್ಲಿ ಐಟಿ–ಬಿಟಿ ಕ್ರಾಂತಿಯನ್ನೇ ಮಾಡಿದ್ದರು. ಬೆಂಗಳೂರನ್ನು ಸಿಲಿಕಾನ್ ಸಿಟಿಯನ್ನಾಗಿಸಿ, ಸಿಂಗಾಪೂರ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದರು. ಎಸ್.ಎಂ.ಕೃಷ್ಣ ರವರು ಅತ್ಯುತ್ತಮ ಆಡಳಿತಗಾರರಾಗಿದ್ದರು. ಎಂತಹ ಕಠಿಣ ಪರಿಸ್ಥಿತಿಯಲ್ಲೂ ಎದೆಗುಂದದೆ ರಾಜ್ಯದಲ್ಲಿ ಅಧಿಕಾರ ನಡೆಸಿದರು. ಡಾ.ರಾಜ್‌ಕುಮಾರ್ ಅವರನ್ನು ಕಾಡುಗಳ್ಳ ವೀರಪ್ಪನ್ ಅಪಹರಿಸಿದ ಸಂದರ್ಭದಲ್ಲಿ ಪರಿಸ್ಥಿತಿಯನ್ನು ನಿಭಾಯಿಸಿದ ರೀತಿ ಅಪ್ರತಿಮವಾದದ್ದು. ತೀವ್ರತರವಾದ ಬರಗಾಲದ ಸಂದರ್ಭದಲ್ಲಿ ರಾಜ್ಯದ ಜನರ ಹಿತಾಸಕ್ತಿಗಾಗಿ ಮೋಡಬಿತ್ತನೆ ಮಾಡಿ ಮಳೆ ಭರಿಸಲು ಮುಂದಾಗಿದ್ದರು. ಸದಾಕಾಲ ಅಭಿವೃದ್ಧಿಯ ಚಿಂತಕರಾಗಿದ್ದ ಶ್ರೀಯುತರು ರಾಜ್ಯಕ್ಕೆ ನೀಡಿರುವ ಕೊಡುಗೆ ಅಪಾರವಾದುದು. ಬಹುಮುಖ ಪ್ರತಿಭೆಯಾಗಿದ್ದ ಅವರಿಗೆ 2023ರಲ್ಲಿ ಪದ್ಮವಿಭೂಷಣ ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಗಿತ್ತು ಎಂದು ಸ್ಮರಿಸಿ, ಎಸ್.ಎಂ. ಕೃಷ್ಣ ಅವರು ನಿಧನರಾದ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಎಸ್.ಎಂ.ಕೃಷ್ಣ ಅವರು ಎಂದಿಗೂ ದ್ವೇಷದ ರಾಜಕಾರಣ ಮಾಡಲಿಲ್ಲ. ಅವರು ಅಲಂಕರಿಸಿದ ಎಲ್ಲ ಉನ್ನತ ಸ್ಥಾನಗಳಿಗೂ ಗೌರವ ತಂದರು. ಗ್ರಾಮೀಣ ಭಾಗದ ಯುವಜನರಿಗೆ ಕಿಯೋನಿಕ್ಸ್ ಮೂಲಕ ಕಂಪ್ಯೂಟರ್ ಶಿಕ್ಷಣ ನೀಡಿದರು. ನಾವು ಹುಟ್ಟಿದಾಗ ಹೆಸರು ಇರುವುದಿಲ್ಲ. ಆದರೆ ಉಸಿರು ಇರುತ್ತದೆ. ಸತ್ತ ನಂತರ ಉಸಿರು ಇರುವುದಿಲ್ಲ, ಹೆಸರು ಮಾತ್ರ ಇರುತ್ತದೆ. ಈ ಹೆಸರು ಶಾಶ್ವತವಾಗಿ ಉಳಿಯುವಂತೆ ಬದುಕು ನಡೆಸಬೇಕು. ಈ ರೀತಿಯಾಗಿ ಬದುಕಿ ತಮ್ಮ ಹೆಸರನ್ನು ಶಾಶ್ವತವಾಗಿಸಿದವರು ಎಸ್.ಎಂ.ಕೃಷ್ಣ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

# ವಿಧಾನ ಸಭೆಯಲ್ಲಿ ಸಂತಾಪ ಸೂಚನೆ

## ಎಸ್.ಎಂ.ಕೃಷ್ಣ ಅವರ ಅಭಿಮಾನಿ ನಾನು: ಮುಖ್ಯಮಂತ್ರಿ ಸಿದ್ದರಾಮಯ್ಯ

ಸಂತಾಪ ಸೂಚನಾ ನಿರ್ಣಯದ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಾವು ವಿದ್ಯಾರ್ಥಿಯಾಗಿದ್ದ ಸಂದರ್ಭದಲ್ಲಿ ಎಸ್.ಎಂ.ಕೃಷ್ಣ ಅವರ ಅಭಿಮಾನಿಯಾಗಿದ್ದೆ ಎಂದರು. 1968ರಲ್ಲಿ ಲೋಕಸಭಾ ಸ್ಥಾನಕ್ಕೆ ಪ್ರಜಾ ಸೋಷಿಯಲಿಸ್ಟ್ ಪಾರ್ಟಿಯಿಂದ ಎಸ್.ಎಂ.ಕೃಷ್ಣ ಅವರು ಸ್ಪರ್ಧಿಸಿದ್ದರು. ಇವರನ್ನು ಬೆಂಬಲಿಸಿ ಮಂಡ್ಯ ವಿದ್ಯಾರ್ಥಿ ಬಳಗದಿಂದ ಮೈಸೂರಿನ ಟೌನ್ ಹಾಲ್ ನಲ್ಲಿ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ ಅವರನ್ನು ಬೆಂಬಲಿಸಿದ್ದೆ. ನಂತರ ಲೋಹಿಯಾ ಅವರ ಸಮಾಜವಾದಿ ಪಕ್ಷ ಸೇರ್ಪಡೆಯಾದೆ. ಎಸ್.ಎಂ.ಕೃಷ್ಣ ಅವರು, 1962 ರಲ್ಲೇ ಸ್ವತಂತ್ರವಾಗಿ ವಿಧಾನಸಭೆಗೆ ಸ್ಪರ್ಧಿಸಿದ್ದರು. ವಿಧಾನಸಭೆ, ವಿಧಾನ ಪರಿಷತ್, ರಾಜ್ಯಸಭೆ, ಲೋಕಸಭೆ ನಾಲ್ಕೂ ಸದನಗಳ ಸದಸ್ಯರೂ ಆಗಿದ್ದು, ರಾಜ್ಯದ ಮುಖ್ಯಮಂತ್ರಿ, ವಿಧಾನಸಭೆ ಸ್ಪೀಕರ್, ಕೇಂದ್ರ ಸಚಿವರು ಹಾಗೂ ರಾಜ್ಯಪಾಲರೂ ಆಗಿದ್ದ ಅಪರೂಪದ ರಾಜಕಾರಣಿಯಾಗಿದ್ದರು. 2005 ರಲ್ಲಿ ಎಸ್.ಎಂ.ಕೃಷ್ಣ ಅವರು ಮಹಾರಾಷ್ಟ್ರ ರಾಜ್ಯಪಾಲರಾಗಿದ್ದಾಗ ಮುಂಬೈನಲ್ಲಿ ಭೇಟಿಯಾಗಿ ಕಾಂಗ್ರೆಸ್ ಸೇರುವ ತೀರ್ಮಾನವನ್ನು ಅವರಿಗೆ ತಿಳಿಸಿದೆ. ಅವರು ನನ್ನ ತೀರ್ಮಾನವನ್ನು ಸ್ವಾಗತಿಸಿದ್ದರು. ಒಳ್ಳೆ ಸಂಸದೀಯ ಪಟು, ಎಲ್ಲರನ್ನೂ ಗೌರವದಿಂದ ಕಾಣುತ್ತಿದ್ದರು.



ಯಾವತ್ತೂ ದ್ವೇಷದ ರಾಜಕಾರಣ ಮಾಡಿದವರಲ್ಲ. ಸಿಂಗಾಪುರದಂತೆ ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸುವ ಕನಸು ಹೊಂದಿದ್ದರು. ಬೆಂಗಳೂರಿಗೆ ಸಿಲಿಕಾನ್ ವ್ಯಾಲಿ ಆಫ್ ಇಂಡಿಯಾ ಎನ್ನುವ ಹೆಗ್ಗಳಿಕೆ ಬರಲು ಎಸ್.ಎಂ.ಕೃಷ್ಣ ಅವರ ಕೊಡುಗೆ ಅಪಾರ. ಕಾಂಗ್ರೆಸ್ ಮೂಲಕ ಸುದೀರ್ಘ ರಾಜಕಾರಣ ಮಾಡಿ, ಬಿಜೆಪಿ ಸೇರಿ ಒಂದು ವರ್ಷಕ್ಕೆ ರಾಜಕೀಯ ನಿವೃತ್ತಿ ಘೋಷಿಸಿದ ದಕ್ಷ ಆಡಳಿತಗಾರ, ಸಜ್ಜನ–ಮುತ್ಸದ್ದಿ ರಾಜಕಾರಣಿ ಆಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸ್ಮರಿಸಿದರು.

## ಬ್ರ್ಯಾಂಡ್ ಬೆಂಗಳೂರಿನ ರುವಾರಿ: ವಿರೋಧ ಪಕ್ಷದ ನಾಯಕ ಅಶೋಕ್

ಇಂದು ನಾವೆಲ್ಲರೂ ಹೆಮ್ಮೆಯಿಂದ ಹೇಳುವ ಬ್ರ್ಯಾಂಡ್ ಬೆಂಗಳೂರು ಎಂಬ ಪರಿಕಲ್ಪನೆಯ ರುವಾರಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದರು. ಸಂತಾಪ ಸೂಚನಾ ನಿರ್ಣಯದ ಮೇಲೆ ಮಾತನಾಡಿದ ಆರ್.ಅಶೋಕ್, ಬೆಂಗಳೂರಿನ ಜನ ಎಂದಿಗೂ ಎಸ್.ಎಂ.ಕೃಷ್ಣ ಅವರ ಅಭಿವೃದ್ಧಿ ಕಾರ್ಯವನ್ನು ಮರೆಯುವುದಿಲ್ಲ. ಇಂದು ಯಾವುದೇ ಅಂತರಾಷ್ಟ್ರೀಯ ನಾಯಕರು ಸಹ ರಾಷ್ಟ್ರಕ್ಕೆ ಬಂದರೆ ತಪ್ಪದೇ ಬೆಂಗಳೂರಿಗೆ ಭೇಟಿ ನೀಡುತ್ತಾರೆ. ಇಂತಹ ಘನತೆ ಬೆಂಗಳೂರು ನಗರಕ್ಕೆ ಬರಲು ಎಸ್.ಎಂ.ಕೃಷ್ಣ ಕಾರಣವಾಗಿದ್ದಾರೆ.ರಾಜ್ಯದ ಅರ್ಥಿಕತೆಗೆ ಶೇ.60 ರಷ್ಟು ಕೊಡುಗೆ ಬೆಂಗಳೂರು ನಗರ ನೀಡುತ್ತದೆ. ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಬೆಂಗಳೂರು ನಗರ ಅಭಿವೃದ್ಧಿಗಾಗಿ ಪ್ರತ್ಯೇಕ ಟಾಸ್ಕ್ ಪೋರ್ಸ್ ರಚಿಸಿ, ಕಳಪೆ ಕಾಮಗಾರಿ ಆಗದ ರೀತಿ ನೋಡಿಕೊಂಡರು. ಪತ್ರಿಷ್ಠಿತ ಇಂಡಿಯಾ ಟುಡೆ ಪತ್ರಿಕೆ ಎಸ್.ಎಂ.ಕೃಷ್ಣ ಅವರನ್ನು ದೇಶದ ನಂ.1 ಮುಖ್ಯಮಂತ್ರಿ ಎಂದು ಬಣ್ಣಿಸಿತ್ತು. ತಮ್ಮ ಆಡಳಿತದ ಅವಧಿಯಲ್ಲಿ ಯಾವುದೇ ಕಳಂಕ, ಭ್ರಷ್ಟಾಚರದ ಆರೋಪಗಳಿಗೆ ಗುರಿಯಾಗದೆ ಆಡಳಿತ ನಡೆಸಿದರು. ಪಾಂಚಜನ್ಯ ಮೂಲಕ ರಾಜ್ಯದ ಜನರ ಆರ್ಶಿವಾದ ಪಡೆದು ಮುಖ್ಯಮಂತ್ರಿಗಳಾದ ಅವರು, ತಮ್ಮ ಆಡಳಿತ ಅವಧಿಯಲ್ಲಿ ತೀವ್ರ ಬರ ಪರಿಸ್ಥಿತಿ, ಕಂಬಾಲಪಲ್ಲಿ ದಲಿತರ ಹತ್ಯೆ, ಡಾ.ರಾಜಕುಮಾರ್ ಅಪರಹಣ, ಮಾಜಿ ಸಚಿವ ನಾಗಪ್ಪ ಅಪಹರಣ, ಕಾವೇರಿ ನೀರು ಹಂಚಿಕೆ ಹೋರಾಟ ಸೇರಿದಂತೆ ಹಲವು ಸವಾಲುಗಳನ್ನು ಎದುರಿಸಿದರು. ಇವುಗಳನ್ನು ಶಾಂತ ರೀತಿಯಿಂದ ಪರಿಹರಿಸಿದರು. ಎಸ್.ಎಂ.ಕೃಷ್ಣ ಅವರ ತಂದೆ ಮಲ್ಲಯ್ಯನವರು ವಿದ್ಯಾರ್ಥಿಗಳಿಗಾಗಿ ಮಂಡ್ಯನಗರದಲ್ಲಿ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್ ನಿರ್ಮಿಸಿದ್ದರು. 1934ರಲ್ಲಿ ಮಹಾತ್ಮ ಗಾಂಧೀಜಿ ಹರಿಜನರ ಉದ್ಧಾರಕ್ಕಾಗಿ ನಿಧಿ ಸಂಗ್ರಹ ಉದ್ದೇಶದಿಂದ ಮಲ್ಲಯ್ಯನವರ ಮನೆಗೂ ಭೇಟಿ ನೀಡಿದ್ದರು. ಈ ವೇಳೆ ಕೃಷ್ಣ ಅವರು ತಮ್ಮ ಬಂಗಾರದ ಕಿವಿಯೋಲೆ ಅರ್ಪಿಸಿ ಗಾಂಧೀಜಿ ಅವರ ಆರ್ಶಿವಾದ ಪಡೆದಿದ್ದನ್ನು ಈ ಸಂದರ್ಭದಲ್ಲಿ ಆರ್.ಅಶೋಕ್ ಸ್ಮರಿಸಿದರು.

## ಕೃಷ್ಣ ಕ್ರೀಡಾಸ್ಪೂರ್ತಿ ನಮಗೆಲ್ಲ ಮಾದರಿ

ತಮ್ಮ ವ್ಯಕ್ತಿತ್ವ ಮೂಲಕವೇ ಎಸ್.ಎಂ.ಕೃಷ್ಣ ಅವರು ಮುಂದಿನ ಪೀಳಿಗೆಗೆ ಮಾದರಿಯಾಗಿದ್ದಾರೆ. ಟೆನಿಸ್ ಕ್ರೀಡಾಪಟು ಆಗಿದ್ದ ಅವರು, ರಾಜಕಾರಣದಲ್ಲೂ ಸಹ ಕ್ರೀಡಾಸ್ಪೂರ್ತಿ ಹೊಂದಿದ್ದರು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು. ಸಂತಾಪ ಸೂಚನಾ ನಿರ್ಣಯದ ಮೇಲೆ ಮಾತನಾಡಿದ ಅವರು ವಿದ್ಯಾರ್ಥಿ ದೆಸೆಯಿಂದಲೂ ಪ್ರತಿಭಾನ್ವಿತರಾಗಿದ್ದ ಎಸ್.ಎಂ.ಕೃಷ್ಣ ಪ್ರಖ್ಯಾತ ವಾಷಿಂಗ್ಟನ್ ವಿಶ್ವ ವಿದ್ಯಾಲಯದಲ್ಲಿ ಫುಲ್ ಬ್ರೈಟ್ ಸ್ಕಾಲರ್ ಪಡೆದ ಏಕೈಕ ರಾಜಕಾರಣಿಯಾಗಿದ್ದಾರೆ. ಬೆಂಗಳೂರನ್ನು ಐ.ಟಿ. ಕ್ರಾಂತಿ ಮೂಲಕ ಇಡಿ ಜಗತ್ತಿಗೆ ಪರಿಚಯಿಸಿಕೊಟ್ಟರು. ಅವರು ಮುಖ್ಯಮಂತ್ರಿಗಳು ಆಗಿದ್ದ ವೇಳೆ ದಿನ ಒಂದಕ್ಕೆ 200 ರಿಂದ 300 ಸಣ್ಣ ಹಾಗೂ ದೊಡ್ಡ ಐ.ಟಿ. ಕಂಪನಿಗಳು ನೊಂದಣಿಯಾಗಿದ್ದ ಉದಾಹರಣೆ ಇದೆ. ಈ ಕಂಪನಿಗಳೇ ಇಂದು ದೈತ್ಯ ಐ.ಟಿ. ಕಂಪನಿಗಳಾಗಿ ಬೆಳದಿವೆ. ಉತ್ತರ ಕರ್ನಾಟಕದ 7 ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಶಾಲೆಗಳಲ್ಲಿ ಜಾರಿಗೆ ತಂದ ಮಧ್ಯಾಹ್ನ ಬಿಸಿಯೂಟ ಯೋಜನೆ ಮುಂದೆ ರಾಷ್ಟ್ರೀಯ ನೀತಿಯಾಗಿ ಇಡೀ ದೇಶದಲ್ಲಿ ಈ ಯೋಜನೆ ಜಾರಿಗೊಳಿಸಲಾಗಿದೆ. ಮುಖ್ಯಮಂತ್ರಿಯಾಗಿ ತಮ್ಮ ಸಂಪುಟದ ಸಹದ್ಯೋಗಿಗಳನ್ನು ಗೌರವದಿಂದ ಕಾಣುತ್ತಿದ್ದರು. ಸಚಿವ ಸಂಪುಟ ಒಪ್ಪಿಗೆ ಪಡೆದು ರಾಷ್ಟ್ರಾದ್ಯಂತ ಗಮನಸೆಳದ ತೆಲಗಿ ಛಾಪಾ ಕಾಗದ ಹಗರಣವನ್ನು ಸಿಬಿಐ ತನಿಖೆಗೆ ಒಪ್ಪಿಸಿದ್ದನ್ನು ಸ್ಮರಿಸಿದರು.

## ಉತ್ತರ ಕರ್ನಾಟಕ ಅಭಿವೃದ್ಧಿಗೆ ಕೃಷ್ಣ ಕೊಡುಗೆ ಅಪಾರ

ಬಚಾವತ್ ನ್ಯಾಯಾಧೀಕರಣ ಶಿಫಾರಸ್ಸು ಮೇರೆಗೆ ಕೃಷ್ಣಾ ನದಿ ನೀರಿನಲ್ಲಿ ರಾಜ್ಯಕ್ಕೆ 734 ಟಿ.ಎಂ.ಸಿ ನೀರು ಲಭಿಸಿತು. ಅದುವರೆಗೂ ಕೇವಲ 400 ಟಿ.ಎಂ.ಸಿ ನೀರಿಗೆ ಮಾತ್ರ ರಾಜ್ಯ ಸರ್ಕಾರ ಯೋಜನೆ ರೂಪಿಸುತ್ತು. ಮುಖ್ಯಮಂತ್ರಿಗಳಾಗಿದ್ದ ಎಸ್.ಎಂ.ಕೃಷ್ಣ ಅವರು ಕೂಡಲೇ 729 ಟಿ.ಎಂ.ಸಿ. ನೀರು ಬಳಕೆಗೆ ಎ ಸ್ಕೀಂ ಯೋಜನೆ ರೂಪಿಸಿ ಅನುದಾನ ನೀಡಿದರು. ಸರ್ಕಾರದ ಒಟ್ಟು ಆಯವ್ಯಯದಲ್ಲಿ ಶೇ.37 ರಷ್ಟು ನೀರಾವರಿ ಯೋಜನಗಳಿಗೆ ಮೀಸಲು ಇರಿಸಿದರು.



ಇದರಲ್ಲಿ ಶೇ.75 ರಷ್ಟು ಅನುದಾನ ಉತ್ತರ ಕರ್ನಾಟಕ ನೀರಾವರಿ ಯೋಜನೆಗಳಿಗೆ ಒದಗಿಸುವ ಮೂಲಕ ಉತ್ತರ ಕರ್ನಾಟಕ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದರು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಹೆಚ್.ಕೆ.ಪಾಟೀಲ್ ಹೇಳಿದರು. ಸಂತಾಪ ಸೂಚನಾ ನಿರ್ಣಯದ ಮೇಲೆ ಮಾತನಾಡಿದ ಸಚಿವ ಹೆಚ್.ಕೆ.ಪಾಟೀಲ್ ರಾಜ್ಯದ ಪ್ರಾದೇಶಿಕ ಅಸಮತೋಲನತೆಯನ್ನು ನಿವಾರಿಸಲು ಎಸ್.ಎಂ.ಕೃಷ್ಣ ಅವರು ಡಾ.ಡಿ.ಎಂ.ನಂಜುಡಪ್ಪ ಅವರ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿದರು. ಈ ಸಮಿತಿ ವರದಿಯನ್ನು ಆಧರಿಸಿ ಹಿಂದುಳಿದ ಪ್ರದೇಶಗಳಿಗೆ ಹೆಚ್ಚಿನ ಅನುದಾನ ನೀಡಿದರು. ತಮ್ಮ ಅಧಿಕಾರವದಿಯಲ್ಲಿ ಸಹಕಾರ ಸದಸ್ಯರಿಗೆ ಯಶಸ್ವಿನಿ ಯೋಜನೆ ಜಾರಿ ಮಾಡಿದರು. ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸ್ತ್ರೀ ಶಕ್ತಿ ಯೋಜನೆ ಜಾರಿ ಮಾಡಿದರು. ಎಸ್.ಎಂ.ಕೃಷ್ಣ ಅವರ ಕೊಡುಗೆ ಸ್ಮರಿಸುವ ದೃಷ್ಟಿಯಿಂದ ವಿಧಾನ ಸೌಧದಲ್ಲಿ ಅವರ ಪ್ರತಿಮೆ ನಿರ್ಮಿಸುವಂತೆ ಸಚಿವ ಹೆಚ್.ಕೆ.ಪಾಟೀಲ್ ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು.

ಸಂತಾಪ ಸೂಚನೆ ನಿರ್ಣಯದ ಮೇಲೆ ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್, ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ, ಮಾಜಿ ಸಚಿವ ಟಿ.ಬಿ.ಜಯಚಂದ್ರ, ಆರಗ ಜ್ಞಾನೇಂದ್ರ ಸೇರಿದಂತೆ ಇತರೆ ಶಾಸಕರು ಮಾತನಾಡಿ, ಮಾಜಿ ಮುಖ್ಯಮಂತ್ರಿಯವರೊಂದಿಗಿನ ಒಡನಾಟ ಹಾಗೂ ಕೊಡಗೆಯನ್ನು ಸ್ಮರಿಸಿದರು.

**ಫಾಸ್ಟ್ ನ್ಯೂಸ್**

## ನಿವೃತ್ತ ನೌಕರರ ವೇದಿಕೆ ವತಿಯಿಂದ ಡಿ.16ರಂದು ಬೆಳಗಾವಿ ಚಲೋ



» **ಚಳ್ಳಕೆರೆ**

ರಾಜ್ಯ ಸರ್ಕಾರ ಕಳೆದ 2022-23ನೇ ಸಾಲಿನಲ್ಲಿ ವಯೋನಿವೃತ್ತಿ ಹೊಂದಿದ ವಿವಿಧ ಇಲಾಖೆಯ ನಿವೃತ್ತ ನೌಕರರಿಗೆ 7ನೇ ವೇತನ ಆಯೋಗದ ಶಿಫಾರಸ್ಸನ್ನು ಅಳವಡಿಸಿ ವೇತನ ನೀಡಲು ವಿಳಂಬ ನೀತಿ ಅನುಸರಿಸುತ್ತಿದ್ದು ಬೆಳಗಾವಿ ಅಧಿವೇಶನದಲ್ಲಿ ಈ ಬಗ್ಗೆ ಪ್ರತಿಭಟನೆ ನಡೆಸಿ ನ್ಯಾಯಯುತವಾಗಿ ಹಕ್ಕು ಪಡೆಯುವುದಾಗಿ ತಾಲ್ಲೂಕು ನಿವೃತ್ತ ನೌಕರರ ವೇದಿಕೆ ಅಧ್ಯಕ್ಷ ಡಿ.ದಯಾನಂದ ತಿಳಿಸಿದರು. ಅವರು, ನಗರದ ಪ್ರವಾಸಿಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪ್ರಸ್ತುತ ಬೆಳಗಾವಿಯಲ್ಲಿ ವಿಧಾನಸಭಾ ಅಧಿವೇಶನ ಆರಂಭವಾಗಿದ್ದು ಅಧಿವೇಶನ ಸಂದರ್ಭದಲ್ಲಿ ನಿವೃತ್ತ ನೌಕರರ ಕೆಲವೊಂದು ಬೇಡಿಕೆ ಈಡೇರಿಸುವಂತೆ ಒತ್ತಾಯ ಪಡಿಸಲಾಗುವುದು ಎಂದರು. ಬೆಳಗಾವಿ ಚಲೋ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ನಿವೃತ್ತ ನೌಕರರು ಭಾಗವಹಿಸುವಂತೆ ಅವರು ಮನವಿ ಮಾಡಿದರು. ತಾಲ್ಲೂಕು ಸಂಚಾಲಕ ಎಚ್.ಪ್ರಕಾಶ್ ಮಾತನಾಡಿ, ತಾಲ್ಲೂಕಿನಾದ್ಯಂತ ಒಟ್ಟು 220 ನಿವೃತ್ತ ನೌಕರರಿಗೆ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಪಿಂಚಣಿ ದೊರೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಹೋರಾಟ ಅನಿವಾರ್ಯವಾಗಿದೆ. ಡಿ.16ರಂದು ಬೆಳಗಾವಿ ಚಲೋ ಕಾರ್ಯಕ್ರಮಕ್ಕೆ ಎಲ್ಲಾ 220 ನೌಕರರ ತಪ್ಪದೆ ಬಾಗವಹಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಟಿ.ಬಸವರಾಜು, ಮಾರಣ್ಣ, ಎಂ.ಸತ್ಯನಾರಾಯಣರಾವ್, ಕಲ್ಪನಾ, ಮಂಜುನಾಥಚಾರ್, ಸಾವಿತ್ರಮ್ಮ, ಜಬೀನಾ, ಪದ್ಮಾವತಿ, ಜಗದೀಶ್, ತಿಪ್ಪೇಸ್ವಾಮಿ, ನಾಗರಾಜು, ಗುರುಮೂರ್ತಿ ಮುಂತಾದವರು ಭಾಗವಹಿಸಿದ್ದರು.

## ಉಪಅರಣ್ಯ ಸಂರಕ್ಷಣಾಧಿಕಾರಿ ಸುರೇಶ್ ಲೋಕಾಯುಕ್ತ ಪೊಲೀಸರ ವಶದಲ್ಲಿ





» **ಚಳ್ಳಕೆರೆ**



ಆಕ್ರಮ ಆಸ್ತಿ ಗಳಿಕೆ ಆರೋಪ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳ ತಂಡ ಮಂಗಳವಾರ ಬೆಳ್ಳಂಬೆಳಗ್ಗೆ ಚಳ್ಳಕೆರೆಯ ಕಾಟಪ್ಪನಹಟ್ಟಿ ಹಿರಿಯೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಸ್.ಸುರೇಶ್‌ರವರ ಮನೆಯ ಮೇಲೆ ದಾಳಿ ನಡೆಸಿ ಅಪಾರ ಹಣ, ಚಿನ್ನಾಭರಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಲೋಕಾಯುಕ್ತ ಎಸ್ಪಿ ವಾಸುದೇವರಾಮ್ ಡಿವೈಎಸ್ಪಿ ಮೃತ್ಯುಂಜಯ ಮತ್ತು ತಂಡ ಈ ದಾಳಿ ನಡೆಸಿದರು. ಮಂಗಳವಾರ ಬೆಳಗ್ಗೆ ಸುರೇಶ್‌ಗೆ ಸೇರಿದ ಬೆಂಗಳೂರಿನ ಒಂದು ಮನೆ, ಚಳ್ಳಕೆರೆಯ ವಿಠಲನಗರ ಮತ್ತು ವಾಲ್ಮೀಕಿ ಬಡಾವಣೆ(ಹೊಸಬೇಡರಹಟ್ಟಿ) ಮನೆಯ ಮೇಲೆ ದಾಳಿ ನಡೆಸಿ ತಪಾಸಣೆ ನಡೆಸಿದಾಗ ಎಸಿಎಫ್ ಸುರೇಶ್ ಮನೆಯಲ್ಲಿ 1ಕೆಜಿ ಚಿನ್ನಾಭರಣ, 5ಲಕ್ಷ ರೂ.ನಗದು ಪತ್ತೆ 9ಎಕರೆ ಜಮೀನು, 3ನಿವೇಶನ ಸೇರಿ ಅಪಾರ ಆಸ್ತಿಪತ್ರ ಪತ್ತೆ ಆದಾಯ ಮೀರಿದ ಆಸ್ತಿ ಗಳಿಕೆ ದಾಖಲೆ ಲೋಕಾಯುಕ್ತರ ವಶಪಡಿಸಿಕೊಂಡಿದ್ದಾರೆ. ಮಂಗಳವಾರ ಬೆಳಗಿನ ಜಾವ ಸುಮಾರು 4.30ರ ಸಮಯದಲ್ಲಿ ಅಧಿಕಾರಿಗಳ ತಂಡ ಏಕಾಏಕಿ ದಾಳಿ ನಡೆಸಿದೆ. ನಿದ್ದೆಯಲ್ಲಿದ್ದ ಸುರೇಶ್ ಮತ್ತು ಕುಟುಂಬಕ್ಕೆ ದಾಳಿ ಮೂಲಕ ಅಧಿಕಾರಿಗಳು ಶಾಕ್ ನೀಡಿದರು. ಬೆಳಗಿನ ಜಾವವೇ ಲೋಕಾ ಅಧಿಕಾರಿಗಳು ಮನೆ ಬಾಗಿಲು ತಟ್ಟಿದ ಕೂಡಲೇ ಸುರೇಶ್‌ಗೆ ಶಾಕ್ ಆಗಿದೆ. ಒಳಪ್ರವೇಶಿಸಿದವರೇ ಅವರಿಂದ ಕೆಲವೊಂದು ಮಾಹಿತಿ ಪಡೆದಿದ್ದಾರೆ.

# ಅಹವಾಲು ಸಲ್ಲಿಸಿದ ವಿದ್ಯಾರ್ಥಿಗಳು



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಸೆಂಟ್ ಜೋಸೆಫ್ ಶಾಲಾ ಸಭಾಂಗಣದಲ್ಲಿ ಮಂಗಳವಾರ ನಡೆದ ಮಕ್ಕಳಿಂದ ಅಹವಾಲು ಸ್ವೀಕಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕಿನ ವಿವಿಧ ಪ್ರೌಢಶಾಲೆ ವಿದ್ಯಾರ್ಥಿಗಳು ಭಾಗವಹಿಸಿ, ಅಹವಾಲುಗಳನ್ನು ಸಲ್ಲಿಸಿದರು.

ಶಾಲೆಗೆ ಶೌಚಾಲಯ, ಕುಡಿಯುವ ನೀರು, ಶಾಲಾ ಕಾಂಪೌಂಡ್ ನಿರ್ಮಾಣ, ಬಸ್ ವ್ಯವಸ್ಥೆ, ಶಾಲಾ ಕೊಠಡಿಗಳ ನಿರ್ಮಾಣ ಸೇರಿದಂತೆ ಇನ್ನಿತರೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವುದು ಸೇರಿದಂತೆ ಹಲವಾರು ಅಹವಾಲುಗಳನ್ನು ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಎದುರಿಗೆ ತಮ್ಮ ಸಮಸ್ಯೆಗಳನ್ನು ತೆರೆದಿಟ್ಟರು.

ಐನಹಳ್ಳಿ ಕುರುಬರಹಟ್ಟಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಕೆ.ಕಾವ್ಯ ಮಾತನಾಡಿ, ಐನಹಳ್ಳಿ ಕುರುಬರಹಟ್ಟಿ ಶಾಲೆಗೆ ದೂರದ ಊರುಗಳಿಂದ ಬಹಳಷ್ಟು ವಿದ್ಯಾರ್ಥಿಗಳು ಬರುತ್ತಿದ್ದು, ಬಸ್‌ನ ವ್ಯವಸ್ಥೆ ಕಲ್ಪಿಸಬೇಕು. ಇದರ ಜೊತೆಗೆ ಶಾಲೆಯಲ್ಲಿ ಕೊಠಡಿ ವ್ಯವಸ್ಥೆ ಕಡಿಮೆ ಇದ್ದು, ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಕ್ರಮವಹಿಸಬೇಕು. ಈ ಕುರಿತು ಮಕ್ಕಳ ಗ್ರಾಮ ಸಭೆಯಲ್ಲಿಯೂ ಚರ್ಚಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಐನಹಳ್ಳಿ ಕುರುಬರಹಟ್ಟಿ ಶಾಲೆಗೆ ಸುತ್ತ-ಮುತ್ತಲಿನ ನಾಲ್ಕೈದು ಊರುಗಳಿಂದ ಆಗಮಿಸುತ್ತಿದ್ದು, ಜಿಲ್ಲಾ ಕೇಂದ್ರದಿಂದ ಸುಮಾರು 14 ಕಿ.ಮೀ ದೂರದಲ್ಲಿದ್ದು, ಸಾರಿಗೆ ಸೌಲಭ್ಯದ ಕೊರತೆ ಇದೆ. ಆದರೂ ಸಹ ಮಕ್ಕಳು ಪೋಷಕರ ಸಹಾಯ ಹಾಗೂ ಸ್ವಯಂಪ್ರೇರಿತವಾಗಿ ಬರುತ್ತಿದ್ದಾರೆ. ಶಿಕ್ಷಕರಿಗೆ ಯಾವುದೇ ರೀತಿಯ ತೊಂದರೆ ಇಲ್ಲ. ವಿಶೇಷವಾಗಿ ಮಕ್ಕಳಿಗೆ ಲ್ಯಾಬ್, ಕಂಪ್ಯೂಟರ್ ತರಗತಿ, ಗ್ರಂಥಾಲಯ ವ್ಯವಸ್ಥೆ ಹಾಗೂ ಹೆಚ್ಚುವರಿ ಕೊಠಡಿಗಳ ನಿರ್ಮಾಣದ ಅಗತ್ಯವಿದ್ದು, ಈಗಾಗಲೇ ಕೆಎಂಇಆರ್‌ಸಿ ಅನುದಾನ ಅಡಿಯಲ್ಲಿ ಯೋಜನೆ ರೂಪಿಸಲಾಗಿದೆ. ಇದರ ಡಿಎಂಎಫ್ ಅನುದಾನದಲ್ಲಿ ಕೊಠಡಿ ನಿರ್ಮಾಣಕ್ಕೆ ಪ್ರಸ್ತಾವನೆಯನ್ನೂ ಸಲ್ಲಿಸಲಾಗಿದ್ದು, ಅನುದಾನ ಬಂದ ನಂತರ ಕಟ್ಟಡನಿರ್ಮಾಣಕ್ಕೆಕ್ರಮವಹಿಸಲಾಗುವುದು ಎಂದು ಹೇಳಿದರು.

ಐನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಕ್ಕಳ ಗ್ರಾಮ ಸಭೆಯಲ್ಲಿ ನಡೆದ ಸಭೆಯ ನಡಾವಳಿಯನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಿಂದ ಪಡೆದು ಕೆಎಸ್‌ಆರ್‌ಟಿಸಿ ಅವರಿಗೆ ಶಿಫಾರಸ್ಸು ಪತ್ರ ನೀಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಸೂಚನೆ ನೀಡಿದರು. ಬಸವನಶಿವನಕೆರೆ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಮಾತನಾಡಿ, ದೂರದ ಊರುಗಳಿಂದ ಆಗಮಿಸುವ ಮಕ್ಕಳಿಗೆ ಸೈಕಲ್ ವ್ಯವಸ್ಥೆ ಮಾಡಿಕೊಡಬೇಕು. ಇದು ಸರ್ಕಾರದ ಮುಂದೆ ಇರುವ ಪ್ರಶ್ನೆ. ಈ ಕುರಿತು ಆಯೋಗವು ಚರ್ಚಿಸಿದ್ದು, ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ತಿಳಿಸಿದರು.

ಚಿಕ್ಕಗೊಂಡನಹಳ್ಳಿ ಸರ್ಕಾರಿ ಶಾಲೆಯ ಮಿಥುನ್ ಮಾತನಾಡಿ, ನಮ್ಮ ಶಾಲೆಗೆ ಶೌಚಾಲಯ ಹಾಗೂ ಕಾಂಪೌಂಡ್ ವ್ಯವಸ್ಥೆ ಇಲ್ಲ. ಗ್ರಾಮದ ಜನರು ಮದ್ಯಪಾನ ಮಾಡುವುದು ಹಾಗೂ ಗಿಡಗಳನ್ನು ಕೀಳುವುದು ಸೇರಿದಂತೆ ಶಾಲೆಯ ಉತ್ತಮ ಪರಿಸರವನ್ನು ಹಾಳು ಮಾಡುತ್ತಿದ್ದಾರೆ.

ಇದರ ಜೊತೆಗೆ ಶಾಲೆಯಲ್ಲಿ ಹೆಚ್ಚುವರಿ ಕೊಠಡಿ ನಿರ್ಮಾಣ ಹಾಗೂ ಕುಡಿಯುವ ನೀರು ಕಲ್ಪಿಸಬೇಕು ಎಂದು ಹೇಳಿದರು. ಇದಕ್ಕೆಪ್ರತಿಕ್ರಿಯಿಸಿದತಾಲ್ಲೂಕುಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ್, ನರೇಗಾ ಯೋಜನೆಯಡಿ ಶಾಲೆಗಳಿಗೆ ಶಾಲಾ ಕಾಂಪೌಂಡ್, ಅಡುಗೆ ಕೋಣೆ, ಶೌಚಾಲಯ ನಿರ್ಮಾಣಕ್ಕೆ ಅವಕಾಶವಿದೆ.

ಈ ಕೂಡಲೇ ಪರಿಶೀಲನೆ ನಡೆಸಿ ಅಗತ್ಯ ಕ್ರಮವಹಿಸಲಾಗುವುದು. ಚಿತ್ರದುರ್ಗ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಶಾಲೆಗಳಿಗೆ ಶೌಚಾಲಯ, ಕಾಂಪೌಂಡ್ ಹಾಗೂ ಅಡುಗೆ ಕೋಣೆ ಅಗತ್ಯವಾಗಿ ಬೇಕಾಗಿದೆ ಎಂಬುವುದರ ಕುರಿತು ಪ್ರಸ್ತಾವನೆ ಸಲ್ಲಿಸಿದರೆ ಪ್ರಸಕ್ತ ವರ್ಷದಿಂದಲೇ ಅನುಷ್ಠಾನಕ್ಕೆ ಕ್ರಮವಹಿಸಲಾಗುವುದು ಎಂದು ಹೇಳಿದರು.ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸಲು ಕ್ರಮ: ರಾಜ್ಯದಲ್ಲಿ ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಹೇಳಿದರು.

ನಗರದ ಸೆಂಟ್ ಜೋಸೆಫ್ ಶಾಲಾ ಸಭಾಂಗಣದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ "ಮಕ್ಕಳಿಂದ ಅಹವಾಲು ಸ್ವೀಕಾರ ಹಾಗೂ ಸಂವಾದ ಕಾರ್ಯಕ್ರಮ" ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಮಕ್ಕಳಿಗೆ ಬಹಳ ಮುಖ್ಯವಾಗಿ ಬಸ್ ವ್ಯವಸ್ಥೆ ಅಗತ್ಯವಾಗಿದ್ದು, ಮಕ್ಕಳ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಬಸ್ ವ್ಯವಸ್ಥೆ ಕಲ್ಪಿಸುವಂತೆ ಮನವಿ ಹಾಗೂ ಅಹವಾಲು ಸಲ್ಲಿಸಲಾಗುತ್ತಿದ್ದು, ರಾಜ್ಯದಲ್ಲಿ ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸುವ ನಿಟ್ಟಿನಲ್ಲಿ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿ ಅವರಿಗೆ ಸೂಕ್ತ ಶಿಫಾರಸ್ಸು ಮಾಡಲು ಆಯೋಗ ವಿಶೇಷ ಅಧ್ಯಯನ ನಡೆಸಲು ಸಂಸ್ಥೆಯೊಂದಕ್ಕೆ ಜವಾಬ್ದಾರಿ ನೀಡಲಾಗಿದೆ ಎಂದರು.

ಸಾರಿಗೆ ವ್ಯವಸ್ಥೆ ಸಂಬಂಧ ಮಕ್ಕಳು ಸಾಕಷ್ಟು ಸವಾಲುಗಳನ್ನು ಎದುರಿಸುತ್ತಿದ್ದು, ಇದು ಆಯೋಗದ ಗಮನಕ್ಕೆ ಬಂದಿದ್ದು, ರಾಜ್ಯದಲ್ಲಿ ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸಲು ಯಾವೆಲ್ಲ ಕ್ರಮಕೈಗೊಳ್ಳಬೇಕು ಎಂಬುವುದರ ಕುರಿತು ಇನ್ನೂ ಆರು ತಿಂಗಳಲ್ಲಿ ವರದಿ ಬರಲಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಡಿಸೆಂಬರ್ ಮಾಹೆಯಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಮಕ್ಕಳಿಂದ ಅಹವಾಲು ಸ್ವೀಕರಿಸುವ ಹಾಗೂ ಸಂವಾದ ಕಾರ್ಯಕ್ರಮ ನಡೆಸಲಾಗುತ್ತಿದೆ. ಅದರಂತೆ ಜಿಲ್ಲೆಯಲ್ಲಿಯೂ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಮಕ್ಕಳ ಹಕ್ಕುಗಳ ತಲುಪಿಸಲು ಹಲವಾರು ಇಲಾಖೆಗಳ ಜವಾಬ್ದಾರಿ ಇದೆ ಎಂದು ಹೇಳಿದರು.

ಪೊಲೀಸ್ ವ್ಯವಸ್ಥೆಯ ಪರಿಚಯ ಮಾಡಿಕೊಡಿ: ಬಾಲನ್ಯಾಯ ಕಾಯ್ದೆ ಅನುಸಾರ ಪ್ರತಿಯೊಂದು ಪೊಲೀಸ್ ಠಾಣೆಯಲ್ಲಿ ಮೂರು ಜನ ಅಧಿಕಾರಿಗಳನ್ನು ಮಕ್ಕಳ ವಿಶೇಷ ಪೊಲೀಸ್ ಘಟಕ ಇದೆ. ತೆರೆದ ಮನೆ ಕಾರ್ಯಕ್ರಮದಡಿಯಲ್ಲಿ ಪ್ರತಿ ಗುರುವಾರ ಪೊಲೀಸ್ ಠಾಣೆಗೆ ಹೋಗಿ ಪೊಲೀಸ್ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ. ಶಿಕ್ಷಕರು ಸ್ಥಳೀಯ ಪೊಲೀಸರ ಸಹಕಾರ ಪಡೆದು ನಿಮ್ಮ ಹತ್ತಿರದ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿ ಬರಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಶಿಕ್ಷಕರಿಗೆ ತಿಳಿಸಿದರು.

ಚಿತ್ರದುರ್ಗ ಉಪವಿಭಾಗದ ಉಪಾಧೀಕ್ಷಕ ದಿನಕರ್ ಮಾತನಾಡಿ, ಪ್ರತಿ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಮಟ್ಟದ ಅಧಿಕಾರಿಯನ್ನು ಮಕ್ಕಳ ಕಲ್ಯಾಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದು, ಅವರಿಗೆ ಇಬ್ಬರು ಸಹಾಯಕರು ಇರುತ್ತಾರೆ. ಮಕ್ಕಳ ಸಂಬಂಧಿತ ಯಾವುದೇ ಪ್ರಕರಣ ಬಂದರೂ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ವಹಿಸುತ್ತಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಡಿವೈಪಿಸಿ ವೆಂಕಟೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಹಂತೇಶ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಹಾಗೂ ಚಿತ್ರದುರ್ಗ ತಾಲ್ಲೂಕಿನ ವಿವಿಧ ಪ್ರೌಢಶಾಲೆಯ ಮಕ್ಕಳು ಹಾಗೂ ಶಿಕ್ಷಕರು ಇದ್ದರು.

## ಸ್ವಂತ ಹಣದಿಂದ ಕ್ರೀಡಾ ಸಾಮಗ್ರಿ ವಿತರಿಸಿದ ಜಿ.ಪಂ ಸಿಇಒ




» **ಚಿತ್ರದುರ್ಗ**

ನಗರದ ಸರ್ಕಾರಿ ಬಾಲ ಮಂದಿರದ ಮಕ್ಕಳಿಗೆ ಸೋಮವಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ತಮ್ಮ ಸ್ವಂತ ಹಣದಿಂದ ಕ್ರೀಡಾ ಸಾಮಗ್ರಿ ವಿತರಿಸಿದರು.

ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅವರು ಈಚೆಗೆ ನಗರದ ಸರ್ಕಾರಿ ಬಾಲಕರ ಬಾಲ ಮಂದಿರ ಮತ್ತು ಸರ್ಕಾರಿ ಬಾಲಕಿಯರ ಬಾಲ ಮಂದಿರಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರತಿಯೊಬ್ಬ ಮಕ್ಕಳ ವೈಯಕ್ತಿಕ ಮಾಹಿತಿಯ ಸೂಕ್ತ ವಿವರ ಪರಿಶೀಲಿಸಿದ ನಂತರ ಮಕ್ಕಳ ವಿದ್ಯಾಭ್ಯಾಸದ ಕೊಠಡಿಗೆ ತೆರಳಿ ಮಕ್ಕಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಮಕ್ಕಳು ಹಾಗೂ ಸಿಬ್ಬಂದಿಯವರೊಂದಿಗೆ ಸಂವಾದ ನಡೆಸಿದಾಗ, ಮಕ್ಕಳೆಲ್ಲರೂ ನಮಗೆ ಕ್ರೀಡಾ ಸಾಮಗ್ರಿಗಳ ಮತ್ತು ಆಟಿಕೆಗಳು ಕೊಡಿಸಿ ಕೊಡಿ ಎಂದು ಪ್ರಸ್ತಾಪ ಮಾಡಿದ್ದರು. ಅಗತ್ಯವಿರುವ ಕ್ರೀಡಾ ಸಾಮಗ್ರಿ ಸರಬರಾಜು ಮಾಡುವುದಾಗಿ ಜಿ.ಪಂ ಸಿಇಒ ಮಾತು ಕೊಟ್ಟಿದ್ದರು. ಈ ಹಿನ್ನಲೆಯಲ್ಲಿ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಸೋಮವಾರ ಜಿ.ಪಂ ಸಿಇಒ ಅವರು ತಮ್ಮ ಸ್ವಂತ ಹಣದಿಂದ ಬಾಲ ಮಂದಿರದ ಮಕ್ಕಳಿಗೆ ಕ್ರೀಡಾ ಸಾಮಗ್ರಿಗಳು ಮತ್ತು ಆಟಿಕೆಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ಶಿಕ್ಷಣಾಧಿಕಾರಿ ಸವಿತಾ ಹಾಗೂ ಸಿಬ್ಬಂದಿಯವರಿಗೆ ವಿತರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಚಿತ್ರದುರ್ಗ ಉಪವಿಭಾಗ ಪೊಲೀಸ್ ಉಪಾಧೀಕ್ಷಕ ಪಿ.ಕೆ.ದಿನಕರ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಸರ್ಕಾರಿ ಬಾಲ ಮಂದಿರದ ಅಧೀಕ್ಷಕರಾದ ಜಿ.ವಿ.ಸಂತೋಷ, ಜ್ಯೋತಿ, ಕಾವೇರಮ್ಮ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

## ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧ: ಶಾಸಕ ಟಿ.ರಘುಮೂರ್ತಿ



» **ಚಿತ್ರದುರ್ಗ**

ಕ್ಷೇತ್ರದ ಅಭಿವೃದ್ಧಿ ನಾನು ಬದ್ದವಾಗಿದ್ದು ಹಂತ ಹಂತವಾಗಿ ಎಲ್ಲಾ ಕೆಲಸಗಳನ್ನು ಮಾಡಲಾಗುತ್ತದೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.ತಾಲೂಕಿತುರುವನೂರುಹೋಬಳಿಯಲ್ಲಿಭಾನುವಾರವಿವಿಧ ಕಾಮಗಾರಿಳಿಗೆ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು.

ಚಿತ್ರದುರ್ಗ ಜಿಲ್ಲಾ ಖನಿಜ ಪ್ರತಿಷ್ಠಾನ ಇಲಾಖೆ ತುರುವನೂರು ಗ್ರಾಮದಲ್ಲಿ ಒಂದು ಕೋಟಿ ವೆಚ್ಚದಲ್ಲಿ ಸಿ.ಸಿ.ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ ಮತ್ತು ಅಧಿಕಾರಿಗಳು ಕಾಮಗಾರಿ ಪ್ರತಿ ಹಂತದಲ್ಲಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು. ತುರುವನೂರು ಗ್ರಾಮ ಪಂಚಾಯಿತಿಯಿಂದ ಸ್ವಚ್ಚ ಭಾರತ ಮಿಷನ್ ಯೋಜನೆಯಡಿ ಕಸದ ಬುಟ್ಟಿ ವಿತರಣೆ ಸಹ ಮಾಡಿದ್ದು ಜನರು ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಹಸಿ ಕಸ ಒಣ ಕಸವನ್ನು ಬೇರ್ಪಡಿಸಿ ಕಸವನ್ನು ವಿಲೇವಾರಿ ಮಾಡುವುದರಿಂದ ಜನರ ಆರೋಗ್ಯ ಸುರಕ್ಷತೆಯಿಂದ ಇರಲು ಸಹಯಾಕವಾಗುತ್ತದೆ.

**ಪ್ರಮುಖ ಸುದ್ದಿ**

# ಎಸ್‌ಎಂಕೆ ಇಂದಿನ ರಾಜಕಾರಣಿಗಳಿಗೆ ಮಾದರಿ



» **ಚಿತ್ರದುರ್ಗ**

ಬೆಂಗಳೂರನ್ನು ಐಟಿ-ಬಿಟಿಯ ಹೆಬ್ಬಾಗಿಲು ಮಾಡಿದ ಕೀರ್ತಿ ಜತೆಗೆ ಅನೇಕ ಜನಪರ ಕಾರ್ಯಕ್ರಮಗಳನ್ನು ಕೊಟ್ಟ ಮಹಾನ್ ನಾಯಕ ಎಸ್.ಎಂ.ಕೃಷ್ಣ ಅವರಿಗೆ ಸಲ್ಲುತ್ತದೆ ಎಂದು ಮಾಜಿ ಸಚಿವ ಮಹೇಶ್ ತಿಳಿಸಿದರು.

ಚಿತ್ರದುರ್ಗ ನಗರದ ಬಿಜೆಪಿ ಕಾರ್ಯಲಯದಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ರಾಜ್ಯ, ರಾಷ್ಟ್ರ ರಾಜಕಾರಣದಲ್ಲಿ ಎಲ್ಲ ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸಿ, ಸಮರ್ಥವಾಗಿ ನಿಭಾಯಿಸಿದ ಬೆರಳೆಣಿಕೆ ರಾಜಕಾರಣಿಗಳಲ್ಲಿ ಎಸ್.ಕೆ.ಕೃಷ್ಣ ಪ್ರಮುಖರು. ಅವರ ಅಗಲಿಕೆ ನಾಡಿಗೆ ಬಹುದೊಡ್ಡ ನಷ್ಟವನ್ನುಂಟು ಮಾಡಿದೆ ಇಡೀ ಜಗತ್ತು ಕರ್ನಾಟಕದ ಕಡೆ ತಿರುಗಿ ನೋಡುವ ರೀತಿ ಐಟಿ-ಬಿಟಿ ಮೂಲಕ ಬೆಂಗಳೂರನ್ನು ಕಟ್ಟಿದ ರೀತಿ, ಜೊತೆಗೆ ಉದ್ಯೋಗ ಸೃಷ್ಠಿಗೆ ಅಗತ್ಯ ಯೋಜನೆ ರೂಪಿಸಿದ ದೂರದೃಷ್ಟಿ ರಾಜಕಾರಣಿ. ಅವರು ಬೆಂಗಳೂರನ್ನು ಐಟಿ-ಬಿಟಿ ಹೆಬ್ಬಾಗಿಲು ಆಗಿಸುವಲ್ಲಿ ಶ್ರಮಿಸಿದ್ದು ವಿಶೇಷ ಎಂದರು.

ಅತ್ಯುತ್ತಮ ಸಂಸದೀಯ ಹಿರಿಯ ಪಟು ಆಗಿದ್ದರು. ಸಮಾಜವಾದಿ ಹಿನ್ನೆಲೆಯಿಂದ ಬಂದ ಎಸ್.ಎಂ.ಕೃಷ್ಣ, ಇಂದಿರಾಗಾಂಧಿ ಅವರ ಜನಪರ ಆಡಳಿತಕ್ಕೆ ಆಕರ್ಷಿತರಾಗಿ ಕಾಂಗ್ರೆಸ್ ಸೇರಿ ಲೋಕಸಭೆ, ವಿಧಾನಸಭೆ ಸದಸ್ಯರು, ಸ್ಪೀಕರ್, ಮಂತ್ರಿ, ಮುಖ್ಯಮಂತ್ರಿ, ರಾಜ್ಯಪಾಲ, ಕೇಂದ್ರ ಸಚಿವ ಸೇರಿ ರಾಷ್ಟ್ರದ ಬಹುತೇಕ ಎಲ್ಲ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮರ್ಥವಾಗಿ ನಿಭಾಯಿಸಿದ ಖ್ಯಾತಿ ಅವರಿಗೆ ಸಲ್ಲುತ್ತದೆ. ಕೆಂಗಲ್ ಹನುಮಂತಯ್ಯ ವಿಧಾನಸಭೆ ಕಟ್ಟಿದರೆ, ಎಸ್.ಎಂ.ಕೃಷ್ಣ ವಿಕಾಸಸೌಧ ನಿರ್ಮಾಣ ಮಾಡುವ ಮೂಲಕ ದೂರದೃಷ್ಟಿಯ ರಾಜಕಾರಣಿ ಎಂಬುದನ್ನು ತಮ್ಮ ಆಡಳಿತದ ಮೂಲಕ ದೃಢಪಡಿಸಿದ ರಾಜಕಾರಣಿ ಯಾಗಿದ್ದರು.

ಕಾಡುಗಳ್ಳ ವೀರಪ್ಪನ್ ನಾಡಿನ ವರನಟ ಡಾ.ರಾಜಕುಮಾರ್ ಅವರನ್ನು ಅಪಹರಣ ಮಾಡಿದ ಸಂದರ್ಭ ಆ ಸವಾಲನ್ನು ಮೆಟ್ಟಿನಿಂತು ಕನ್ನಡದ ಕಣ್ಮಣಿಯನ್ನು ನಾಡಿಗೆ ಕರೆತಂದಿದ್ದು ಇತಿಹಾಸದ ಪುಟಗಳಲ್ಲಿ ದಾಖಲಾಗುವಂತ ಘಟನೆ. ಇಂತಹ ಅಪರೂಪದ ರಾಜಕಾರಣಿಯ ಮಾಗದರ್ಶನ ನಾಡಿಗೆ ಇನ್ನಷ್ಟು ಕಾಲ ಬೇಕಿತ್ತು ಎಂದು ಸಂತಾಪ ವ್ಯಕ್ತಪಡಿಸಿದರು. ರಾಷ್ಟ್ರ, ರಾಜ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದ ಎಸ್.ಎಂ.ಕೃಷ್ಣ ಅವರ ನಿಧನದಿಂದ ನಾಡು ಒಬ್ಬ ಶ್ರೇಷ್ಠ ನಾಯಕನನ್ನು ಕಳೆದುಕೊಂಡಿದೆ. ಮಿತ ಭಾಷಿ, ಸೌಮ್ಯ ಸ್ವಭಾವದ ಎಸ್. ಎಂ. ಕೃಷ್ಣ ಅವರು ಸುಮಾರು ಆರು ದಶಕಗಳ ಕಾಲ ರಾಜ್ಯ ಮತ್ತು ರಾಷ್ಟ್ರ ರಾಜ್ಯಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿ ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ ಅವರಿಗೆ ಅಶ್ರುಪೂರ್ಣ ಶ್ರದ್ಧಾಂಜಲಿ ಸಲ್ಲಿಸುತ್ತಾ, ಅಗಲಿದ ಆ ಹಿರಿಯ ಚೇತನಕ್ಕೆ ದೇವರು ಉತ್ತಮ ಸದ್ಗತಿಯನ್ನು ದಯಪಾಲಿಸಲಿ ಅವರ ಕುಟುಂಬದ ಸದಸ್ಯರು, ಅಪಾರ ಅಭಿಮಾನಿಗಳಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಕೋರಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ಮೋಹನ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ರಾಜ್ಯ ಯುವ ಮೋರ್ಚಾ ಕಾರ್ಯದರ್ಶಿ ಭಾರ್ಗವಿ ದ್ರಾವಿಡ್, ಸಾಂಸ್ಕೃತಿಕ ಪ್ರಕೋಷ್ಠ ಜಿಲ್ಲಾ ಸಂಚಾಲಕ ಮೊರಾರ್ಜಿ, ಸಂವಿಧಾನ ಸಂಮಾನ್ ಅಭಿಯಾನದ ಜಿಲ್ಲಾ ಸಹ ಸಂಚಾಲಕ, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ, ಕಾರ್ಯಾಲಯದ ಕಾರ್ಯದರ್ಶಿ ಶಂಭು ಎಸ್.ಸಿ.ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ಪರಶುರಾಮ್, ಚಳ್ಳಕೆರೆ ರೈತ ಮೋರ್ಚಾದ ಅಧ್ಯಕ್ಷ ನವೀನ್ ಮಹಾಂತೇಶ್ ಸೇರಿದಂತೆ ಇತರರು ಭಾಗವಹಿಸಿದರು.

## ಫಾಸ್ಟ್ ನ್ಯೂಸ್

### ಹೊಸದುರ್ಗ ಸುತ್ತಾ ಮುತ್ತಾ ಇಂದು ವಿದ್ಯುತ್ ವ್ಯತ್ಯಯ

» ಹೊಸದುರ್ಗ

ಪಟ್ಟಣದಲ್ಲಿ ರಸ್ತೆ ಅಗಲೀಕರಣ ಮತ್ತು ಒಳಚರಂಡಿ ನಿರ್ವಹಣಾಕಾಮಗಾರಿನಿರ್ವಹಿಸುತ್ತಿರುವುದರಿಂದ ಡಿ,11 ರಂದು ಇಂದು (ಬುಧವಾರ ) ಬೆಳಿಗ್ಗೆ 10 ರಿಂದ ಸಂಜೆ 6 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು ಹೊಸದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಕೆಲ್ಲೋಡು, ಹುಣವಿನಡು, ಕಂಗುವಳ್ಳಿ ಮತ್ತು ಬೋಕಿಕೆರೆ ಪಂಚಾಯಿತಿಯ ಎಲ್ಲಾ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾಜಿಮುಖ್ಯಮಂತ್ರಿ ಕೃಷ್ಣ ನಿಧನಕ್ಕೆ ಬಿಜೆಪಿ ಕಂಬನಿ: ಶ್ರದ್ಧಾಂಜಲಿ



» ಚಳ್ಳಕೆರೆ

ಕರ್ನಾಟಕ ರಾಜ್ಯವನ್ನು ಐಟಿಬಿಟಿ ಮೂಲಕ ಇಡೀ ವಿಶ್ವವೇಗುರುತಿಸುವಂತೆಮಾಡಿದಮಹಾನ್‌ನಾಯಕ ದಿವಂಗತ ಮಾಜಿಮುಖ್ಯಮಂತ್ರಿ ಸೋಮನಹಳ್ಳಿ ಮಲ್ಲಯ್ಯ ಕೃಷ್ಣರವರು. ತಮ್ಮ ಸುಧೀರ್ಘ ರಾಜಕೀಯ ಜೀವನದಲ್ಲಿ ಎದುರಾಳಿಗಳನ್ನೇ ಕಾಣದಂತಹ ಸೌಮ್ಯಸ್ವಾಭಾವದರು. ಅವರ ದೂರುದೃಷ್ಠಿಫಲವಾಗಿ ಇಂದು ಬೆಂಗಳೂರು ನಗರ ಐಟಿಬಿಟಿ ಜೊತೆಗೆ ಮೆಟ್ರೋ ರೈಲು ಪಡೆಯುವಂತಾಗಿದೆ. ಅವರ ಸೇವೆಯನ್ನು ನಾಡಿನ ಜನ ಸದಾಸ್ಮರಿಸಬೇಕೆಂದು ಭಾರತೀಯ ಜನತಾ ಪಕ್ಷದ ರಾಜ್ಯ ಪ್ರಕೋಷ್ಠ ನಾಯಕ ದತ್ತಾತ್ರೇಯ ತಿಳಿಸಿದರು.

ಅವರು, ಮಂಗಳವಾರ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಅಗಲಿದ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಮಂಡಲ ಸಂಘಟನೆಯ ಬಗ್ಗೆ ಹಮ್ಮಿಕೊಂಡಿದ್ದ ಸಂಘಟನಾ ಪರ್ವ ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ ಮಾತನಾಡಿ, ಪಕ್ಷ ಸಂಘಟನೆಯನ್ನು ಚುರುಕುಗೊಳಿಸುವಲ್ಲಿ ಯಶಸ್ವಿಯಾಗಿದೆ. ಜಿಲ್ಲೆಯಾದ್ಯಂತ ಪಕ್ಷಕ್ಕೆ ಸ್ವಯಂ ಪ್ರೇರಣೆಯಿಂದ ನೊಂದಾವಣೆಯಾಗುವವರ ಸಂಖ್ಯೆ ಹೆಚ್ಚುತ್ತಿದೆ. ಕರ್ನಾಟಕದ ಹಿರಿಯ ರಾಜಕಾರಣಿ, ಸ್ನೇಹ ಜೀವಿ ಎಸ್.ಎಂ.ಕೃಷ್ಣರವರ ನಿಧನ ತುಂಬಲಾರದ ನಷ್ಟ ಎಂದರು.

ಮಂಡಲ ಪ್ರಧಾನ ಕಾರ್ಯದರ್ಶಿ ಶಶಿಧರರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಸಂಪತ್‌ಕುಮಾರ್, ಮಲ್ಲಿಕಾರ್ಜುನ್, ಜೆ.ಪಿ.ಜಯಪಾಲಯ್ಯ, ಎಲೆಭದ್ರಣ್ಣ, ದೇವರಾಜರೆಡ್ಡಿ, ಟಿ.ಮಂಜುನಾಥ, ನಗರ ಘಟಕದ ಅಧ್ಯಕ್ಷ ಈಶ್ವರನಾಯಕ, ದುಗ್ಗಾವರರಂಗಸ್ವಾಮಿ, ಟಿ.ತಿಮ್ಮಪ್ಪ, ದೊರೆನಾಗರಾಜ, ಭರತ್‌ಕುಮಾರ್(ಚಿನ್ನು), ಸುರೇಶ್ ಮುಂತಾದವರು ಭಾಗವಹಿಸಿದ್ದರು.

### ಎಸ್.ಎಂ.ಕೃಷ್ಣ ನಿಧನಕ್ಕೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸಂತಾಪ

» ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅವರು ಇಂದು ನಮ್ಮನ್ನಗಲಿರುವುದು ತುಂಬಾ ದುಃಖದ ಸಂಗತಿಯಾಗಿದೆ ಎಂದು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಕಳೆದ 3–4 ತಿಂಗಳ ಹಿಂದೆ ಎಸ್.ಎಂ.ಕೃಷ್ಣ ಅವರು ನನಗೆ ಒಂದು ವಿಮಾನ ಪ್ರಯಾಣದ ಸಂದರ್ಭದಲ್ಲಿ ನಾನು ಭೇಟಿ ಮಾಡಿದ್ದೆ. ಆಗ ಎಸ್.ಎಂ.ಕೃಷ್ಣ ಅವರು ನನಗೆ ಸಾಕಷ್ಟು ರಾಜಕೀಯ ಮಾರ್ಗದರ್ಶನ ಮತ್ತು ಜನಸೇವೆಯ ಬಗ್ಗೆ ಹಿತವಚನ ನೀಡಿ, ಪ್ರಚಲಿತ ರಾಜಕೀಯ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ನಾನು ಅವರಿಂದ ಆಶೀರ್ವಾದ ಪಡೆದ ನಾನೇ ಪುಣ್ಯವಂತ ಎಂದು ಭಾವಿಸುತ್ತಾ, ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಆತ್ಮಕ್ಕೆ ಭಗವಂತ ಶಾಂತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ತಿಳಿಸಿದ್ದಾರೆ.

### ಬೆಲಗೂರಿನಲ್ಲಿ ಇಂದಿನಿಂದ ಧಾರ್ಮಿಕ ಕಾರ್ಯಕ್ರಮ

» ಹೊಸದುರ್ಗ

ತಾಲೂಕಿನ ಪಾವನ ಪುಣ್ಯ ಕ್ಷೇತ್ರವಾದ ಶ್ರೀಕ್ಷೇತ್ರ ಬೆಲಗೂರಿನಲ್ಲಿ ಡಿ.11 ರಿಂದ ಡಿ.15 ವರೆಗೆ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಹನುಮ ಜಯಂತಿ ಮತ್ತು ರಥೋತ್ಸವ ಕಾರ್ಯಕ್ರಮಗಳು ನಡೆಯಲಿದ್ದು ಡಿ.13 ರಂದು ಶ್ರೀ ಲಕ್ಷ್ಮೀನಾರಾಯಣಸ್ವಾಮಿಯವರ ಮತ್ತು ಶ್ರೀ ವೀರಪ್ರತಾಪ ಆಂಜನೇಯಸ್ವಾಮಿಯವರ ಮಹಾ ಬ್ರಹ್ಮ ರಥೋತ್ಸವ ಕಾರ್ಯಕ್ರಮ ನಡೆಯಲಿದೆ.

# ಚಿಂತಕರ ಚಾವಡಿಯ ಸದಸ್ಯರಿಂದ ನುಡಿನಮನ

» ಬೆಳಗಾವಿ ಸುವರ್ಣ ವಿಧಾನಸೌಧ

"ಎಸ್ ಎಂ ಕೃಷ್ಣ ಅವರು ದೇವರಾಜು ಅರಸು ಸರಿ ಸಮಾನವಾದ ಮೌಲ್ಯಯುತ ಆಡಳಿತ ನಡೆಸಿದ ಧೀಮಂತ.. ಎಲ್ಲರನ್ನೂ ಒಳಗೊಳ್ಳುವ ರಾಜಕಾರಣ ಮಾಡಿದ ಮುತ್ಸದ್ಧಿ"

ಡಿಸೆಂಬರ್ 10ರಂದು ನಡೆದ ಎರಡನೇ ದಿನದ ಅಧಿವೇಶನದಲ್ಲಿ 'ಚಿಂತಕರ ಚಾವಡಿ' ಎಂದೇ ಹೆಸರಾದ ಮೇಲ್ಮನೆಯಲ್ಲಿ ಈ ಮೇಲಿನಂತೆ ಎಸ್ ಎಂ ಕೃಷ್ಣ ಅವರ ವ್ಯಕ್ತಿತ್ವವನ್ನು ಬಣ್ಣಿಸಲಾಯಿತು.

ಸಂತಾಪ ಸೂಚನೆಯ ನಿರ್ಣಯದ ಪ್ರಕಟಣೆ ಬಳಿಕ ಸಭಾಪತಿ ಬಸವರಾಜ ಹೊರಟ್ಟಿ ಅವರು ಸದಸ್ಯರಿಗೆ ಮಾತನಾಡಲು ಅವಕಾಶ ಕಲ್ಪಿಸಿದರು.



**ಸಮಚಿತ್ತ ಹೊಂದಿದ್ದರು:** ವಿಧಾನ ಪರಿಷತ್ ಶಾಸಕರಾದ ಡಾ.ತಿಮ್ಮಯ್ಯ ಅವರು ಮಾತನಾಡಿ, ಡಾ.ರಾಜಕುಮಾರ ಅವರು ಅಪಹರಣವಾದಾಗ ಅವರನ್ನು ರಕ್ಷಣೆ ಮಾಡಿ ನಾಡಿಗೆ ಒಪ್ಪಿಸಿದ ಕೀರ್ತಿ ಎಸ್ ಎಂ ಕೃಷ್ಣ ಅವರಿಗೆ ಸಲ್ಲುತ್ತದೆ ಎಂದರು.

ಶಿಸ್ತುಬದ್ಧ ರಾಜಕಾರಣಿ: ಪರಿಷತ್ ಶಾಸಕರಾದ ಎಸ್ ಎಲ್ ಭೋಜೇಗೌಡ

ಅವರು ಮಾತನಾಡಿ, ಕೃಷ್ಣ ಅವರು ನಾಲ್ಕು ಸದನಗಳಲ್ಲಿ ಕುಳಿತು ಸೇವೆ ಮಾಡಿದರು. ಶಿಸ್ತುಬದ್ಧವಾದ ರಾಜಕಾರಣಿಯಾಗಿದ್ದರು. ಯಾವುದಕ್ಕು ಧೃತಿ ಗೆಡುತ್ತಿರಲಿಲ್ಲ. ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಿದ ಕೀರ್ತಿ ಕೃಷ್ಣ ಅವರಿಗೆ ಸಲ್ಲುತ್ತದೆ ಎಂದರು.

ನೋಡಿ ಕಲಿಯಬೇಕು: ಪರಿಷತ್ ಶಾಸಕರಾದ ಶಶೀಲ್ ಜಿ ನಮೋಶಿ ಅವರು ಮಾತನಾಡಿ, ದೇವದುರ್ಗದಲ್ಲಿ ಶಾಲಾ ಮಕ್ಕಳಿಗೆ ಬಿಸಿಯೂಟ ಕೊಡುವ ಮೂಲಕ ಬಿಸಿ ಊಟ ಯೋಜನೆಯನ್ನು ಆರಂಭಿಸಿದರು. ನೋಡಿ ಕಲಿಯುವಂತಹ ರಾಜಕಾರಣಿ ಎಸ್ ಎಂ ಕೃಷ್ಣ ಆಗಿದ್ದರು ಎಂದರು.

ಮುಂದಿನ ಪೀಳಿಗೆಗೆ ಸ್ಫೂರ್ತಿ: ಪರಿಷತ್ ಶಾಸಕರಾದ ಬಿ.ಕೆ.ಹರಿಪ್ರಸಾದ್ ಅವರು ಮಾತನಾಡಿ, ವಿದ್ಯಾರ್ಥಿ ದಿಶೆಯಿಂದಲು ನಾವು ಎಸ್ ಎಂ ಕೃಷ್ಣ ಅವರೊಂದಿಗೆ ಒಡನಾಟ ಹೊಂದಿದ್ದೆವು. ಎಲ್ಲ ಸದನದಲ್ಲೂ ಸದಸ್ಯರಾಗಿ ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗುವಂತೆ ಆಡಳಿತ ನಡೆಸಿದರು ಎಂದರು.

ಸಮಯೋಚಿತ ರಾಜಕಾರಣಿ: ಪರಿಷತ್ ಶಾಸಕರಾದ ಸಿ.ಟಿ.ರವಿ ಅವರು ಮಾತನಾಡಿ, ಪ್ರತಿಯೊಂದನ್ನು ಸಮಯೋಚಿತವಾಗಿ ಮಾಡುವ, ಉತ್ತಮ ನಿರ್ಣಯ ತೆಗೆದುಕೊಂಡು ಆಡಳಿತ ನಡೆಸಿದ ಕೀರ್ತಿ ಎಸ್ ಎಂ ಕೃಷ್ಣ ಅವರಿಗೆ ಸಲ್ಲುತ್ತದೆ ಎಂದರು.

ಶಿಕ್ಷಣದಲ್ಲಿ ಕ್ರಾಂತಿ ಮಾಡಿದರು: ಕೃಷ್ಣ ಅವರ ಆತ್ಮೀಯತೆ, ಸಂಸ್ಕಾರ, ನಡವಳಿಕೆ ಎಲ್ಲವೂ ವಿಶೇಷವಾಗಿತ್ತು. ಕೃಷ್ಣ ಅವರು

ಈ ನಾಡಿನ ಸಾಂಸ್ಕೃತಿಕ ನಾಯಕ. ನನ್ನ ಸರ್ಕಾರದ ಮೊದಲ ಆದ್ಯತೆ ಅಕ್ಷರ ಮತ್ತು ಆರೋಗ್ಯ ಎಂದು ಹೇಳುತ್ತಿದ್ದರು. ತಮ್ಮ ಸಂಪುಟದಲ್ಲಿ ನನಗೆ ಶಾಲಾ ಶಿಕ್ಷಣ ಖಾತೆ ನೀಡಿದರು. ಸರ್ಕಾರಿ ಶಾಲೆಗಳನ್ನು ದೇವಾಲಯದ ರೀತಿ ಮಾಡಿದರು. ಮಕ್ಕಳನ್ನು ದೇವರೆಂದು ಭಾವಿಸಿದ್ದರು ಎಂದು ಪರಿಷತ್ ಶಾಸಕರಾದ ಅಡಗೂರ ಹೆಚ್ ವಿಶ್ವನಾಥ ಅವರು ತಿಳಿಸಿದರು.

ಮಾನವೀಯ ಮೌಲ್ಯ ಹೊಂದಿದ್ದರು: ಪರಿಷತ್ ಶಾಸಕರಾದ ಎಂ.ನಾಗರಾಜ ಅವರು ಮಾತನಾಡಿ, ಕೃಷ್ಣ ಅವರು ಮಾನವೀಯ ಮೌಲ್ಯ ಹೊಂದಿದ ನಾಯಕರಾಗಿದ್ದರು. ಶಿಸ್ತು ಸಂಯಮದ ರಾಜಕಾರಣ ಮಾಡಿದರು ಎಂದರು.

ಬುದ್ಧ,ಬಸವಅಂಬೇಡ್ಕರ್ ವಿಚಾರಧಾರೆ: ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ ಅವರು ಮಾತನಾಡಿ, ಬುದ್ಧ, ಬಸವ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ವಿಚಾರಧಾರೆಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ವಿಕಾಸಸೌಧವನ್ನು ನಿರ್ಮಿಸಿದ ಕೀರ್ತಿ ಕೃಷ್ಣ ಅವರಿಗೆ ಸಲ್ಲುತ್ತದೆ ಎಂದರು.

**ಡ್ರೆಸ್‌ಕೋಡ್ ವಿಶೇಷ:** ಪರಿಷತ್ ಶಾಸಕರಾದ ಶರವಣ ಟಿ.ಎ. ಅವರು ಮಾತನಾಡಿ, ವಿದೇಶದ ಜನರು ಕರ್ನಾಟಕದತ್ತ ನೋಡುವಂತೆ ಬೆಂಗಳೂರನ್ನು ಅಭಿವೃದ್ಧಿಪಡಿಸಿದರು. ಅವರು

ವ್ಯಕ್ತಿಯಲ್ಲ; ದೊಡ್ಡ ಶಕ್ತಿಯಾಗಿದ್ದರು. ಅವರ ಡ್ರೆಸ್ ಕೋಡ್, ಸಮಯಕ್ಕೆ ಸರಿಯಾಗಿ ಮಾಡುವ ಕಾರ್ಯವಿಧಾನ ಕೂಡ ವಿಶೇಷ ಎಂದರು.

**ಹೃದಯ ವೈಶಾಲ್ಯತೆ:** ಪರಿಷತ್ ಶಾಸಕರಾದ ಪಿ ಎಚ್ ಪೂಜಾರ ಅವರು ಮಾತನಾಡಿ, ಸಿಎಂ ಆಗಿದ್ದಾಗ ಆಲಮಟ್ಟಿ ಜಲಾಶಯದ ಬಗ್ಗೆ ಗಮನ ಹರಿಸಿದ್ದರು. ಬಾಗಲಕೋಟಿ ಆಲಮಟ್ಟಿ ಸಂತ್ರಸ್ತರಿಗಾಗಿ ವಿಶೇಷ ಪ್ಯಾಕೇಜ್ ನೀಡಿ ಸ್ಪಂದನೆ ನೀಡಿದ್ದು ವಿಶೇಷ. ಹೃದಯ ವೈಶಾಲ್ಯ ಹೊಂದಿದ ರಾಜಕಾರಣಿಯಾಗಿದ್ದರು ಎಂದರು.

**ಮುತ್ಸದ್ಧಿ ರಾಜಕಾರಣಿ:** ಪರಿಷತ್ ಶಾಸಕರಾದ ಎನ್ ರವಿಕುಮಾರ್ ಅವರು ಮಾತನಾಡಿ, ಎಸ್ ಎಂ ಕೃಷ್ಣ ಅವರು ಸಮದೃಷ್ಟಿ ಹೊಂದಿದ ಮರೆಯಲಾರದ ರಾಜಕಾರಣಿಯಾಗಿದ್ದರು. ಪ್ರತಿಭಟನೆಕಾರರಿಗೆ ಸ್ಪಂದನೆ ನೀಡುತ್ತಿದ್ದರು. ಸಮಾಜವನ್ನು ಚೆನ್ನಾಗಿ ಅರ್ಥ ಮಾಡಿಕೊಂಡು ಉತ್ತಮ ರಾಜಕಾರಣ ಮಾಡಿದರು. ಬೆಂಗಳೂರನ್ನು ಕ್ಲೀನ್ ಸಿಟಿ ಗ್ರೀನ್ ಸಿಟಿ ಮಾಡಿದರು.

**ಚಿತ್ರರಂಗದೊಂದಿಗೆ ಉತ್ತಮ ಬಾಂಧವ್ಯ:** ಪರಿಷತ್ ಶಾಸಕರಾದ ಮಂಜುನಾಥ್ ಭಂಡಾರಿ ಅವರು ಮಾತನಾಡಿ, ಯುವ ನಾಯಕರಿಗೆ ಸ್ಫೂರ್ತಿ ತುಂಬುತ್ತಿದ್ದರು. ಚಿತ್ರರಂಗದೊಂದಿಗೆ ಸಹ ಉತ್ತಮ ಬಾಂದವ್ಯ ಹೊಂದಿದ್ದರು ಎಂದರು.

ಜಾತಿರಹಿತ ರಾಜಕಾರಣಿ:

ಪರಿಷತ್ ಶಾಸಕರಾದ ಉಮಾಶ್ರೀ ಅವರು ಮಾತನಾಡಿ, ಕೃಷ್ಣ ಅವರು ತಮ್ಮ ಆಡಳಿತಾವಧಿಯಲ್ಲಿ ಕಾರ್ಯಕರ್ತರನ್ನು ಗುರುತಿಸಿ ಪ್ರೋತ್ಸಾಹ ನೀಡಿದರು. ಸಣ್ಣ ಸಣ್ಣ ಸಮುದಾಯಗಳ ಕಾರ್ಯಕರ್ತರಿಗೆ ವಿಶೇಷ ಆದ್ಯತೆ ಕಲ್ಪಿಸಿದರು ಎಂದರು.

**ಕರ್ನಾಟಕ ರಾಜ್ಯದ ಜೆಂಟಲಮನ್:** ಪರಿಷತ್ ಶಾಸಕರಾದ ಕೆ ಎಸ್ ನವೀನ್ ಅವರು ಮಾತನಾಡಿ, ಕೃಷ್ಣ ಅವರು ಅಳಿಸಲಾಗದ ಸೇವೆಯನ್ನು ರಾಜ್ಯ ಮತ್ತು ರಾಷ್ಟ್ರಕ್ಕೆ ನೀಡಿದ್ದಾರೆ ಎಂದರು.

**ರೈತರ ಒಡನಾಡಿ:** ಪರಿಷತ್ ಶಾಸಕರಾದ ಮಧು ಜಿ ಮಾದೇಗೌಡ ಅವರು ಮಾತನಾಡಿ, ಕೃಷ್ಣ ಅವರ ಕಾಲದಲ್ಲಿ ಬರ ಪರಿಸ್ಥಿತಿ ತಲೆದೋರಿದಾಗ ರೈತರ ಒಡನಾಡಿಯಾಗಿ ಅದನ್ನು ಸರಿಯಾಗಿ ನಿಬಾಯಿಸಿದರು.ಕಂಪ್ಯೂಟರ್ ಶಿಕ್ಷಣಕ್ಕಾಗಿ ಮಾಹಿತಿ ಸಿಂಧು ಕಾರ್ಯಕ್ರಮ ಜಾರಿ ಮಾಡಿದರು ಎಂದರು.

**ಬುದ್ಧಿವಾದ ಹೇಳುತ್ತಿದ್ದರು:** ಪರಿಷತ್ ಶಾಸಕರಾದ ನಸೀರ್ ಅಹ್ಮದ್ ಅವರು ಮಾತನಾಡಿ, ಸದನದಲ್ಲಿ ಹೇಗಿರಬೇಕು. ಹೇಗೆ ಮಾತಾಡಬೇಕು ಎಂದು ಯುವ ರಾಜಕಾರಣಿಗಳಿಗೆ ಸಲಹೆ ಮಾಡುತ್ತಿದ್ದರು. ಐಟಿಬಿಟಿಗೆ ವಿಶೇಷ ಒತ್ತು ನೀಡಿದ್ದರು ಎಂದರು.

**ಐಟಿ–ಬಿಟಿಯ ವಾರಸುದಾರ:** ಪರಿಷತ್ ಶಾಸಕರಾದ ಹೆಚ್ ಪಿ ಸುಧಾಮ್ ದಾಸ್ ಅವರು ಮಾತನಾಡಿ, ಕೃಷ್ಣ ಅವರು ರಾಜಕಾರಣದ ವಿಶೇಷ ನೆಲವಾದ ಮಂಡ್ಯದಿಂದ ಬಂದು ವಿಶಿಷ್ಟ ರಾಜಕಾರಣ ಮಾಡಿದರು. ಮಾಹಿತಿ ತಂತ್ರಜ್ಞಾನಕ್ಕೆ ಉತ್ತೇಜನ ನೀಡಿ ಐಟಿ ಬಿಟಿಯ ವಾರಸುದಾರ ಎಂದು ಖ್ಯಾತಿ ಪಡೆದರು ಎಂದರು.

**ಸಮರ್ಥ ನಿರ್ವಹಣೆ:** ಪರಿಷತ್ ಶಾಸಕರಾದ ಐವನ್ ಡಿ'ಸೋಜಾ ಅವರು ಮಾತನಾಡಿ, ವಿಧಾನಸಭೆ, ವಿಧಾನ ಪರಿಷತ್, ರಾಜ್ಯ ಸಭೆ, ಲೋಕಸಭೆ ಎಲ್ಲ ಕಡೆಗೂ ಉತ್ತಮವಾಗಿ ಕಾರ್ಯ ನಿರ್ವಹಿಸಿ ತಮಗೆ ವಹಿಸಿದ ಖಾತೆಗಳನ್ನು ಸಮರ್ಥವಾಗಿ ನಿರ್ವಹಣೆ ಮಾಡಿದರು ಎಂದರು.

**ಕ್ರೀಡಾ ಕ್ಷೇತ್ರದ ಒಲವು:** ಪರಿಷತ್ ಶಾಸಕರಾದ ಗೋವಿಂದರಾಜು ಅವರು ಮಾತನಾಡಿ, ಕ್ರೀಡಾ ಕ್ಷೇತ್ರದ ಬಗ್ಗೆ ಸಹ ಕೃಷ್ಣ ಅವರಿಗೆ ಒಲವಿತ್ತು. ವಿಂಬಲ್ಡನ್ ಕ್ರೀಡಾಕೂಟ ವೀಕ್ಷಣೆಗಾಗಿ ವಿದೇಶಕ್ಕೆ ತೆರಳುತ್ತಿದ್ದರು ಎಂದರು.

**ಸ್ಮಾರ್ಟ್ ರಾಜಕಾರಣಿ:** ಪರಿಷತ್ ಶಾಸಕರಾದ ಕೇಶವ ಪ್ರಸಾದ ಎಸ್ ಅವರು ಮಾತನಾಡಿ, ಕೃಷ್ಣ ಅವರು ತಮ್ಮ ಆಡಳಿತಾವಧಿಯಲ್ಲಿ ಗಮನಾರ್ಹ ಕೆಲಸ ಮಾಡಿ ಸ್ಮಾರ್ಟ್ ರಾಜಕಾರಣಿಯಾಗಿ ಗುರುತಿಸಿಕೊಂಡರು ಎಂದು ತಿಳಿಸಿದರು.

ಸಂತಾಪ: ಮೃತರ ಗೌರವಾರ್ಥ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನ ಆಚರಿಸಿ ಗೌರವ ಸಲ್ಲಿಸಿದರು.

## ಎಸ್.ಎಂ.ಕೃಷ್ಣ ನಿಧನಕ್ಕೆ ಮೇಲ್ಮನೆಯಲ್ಲಿ ಸಂತಾಪ

» ಬೆಳಗಾವಿ ಸುವರ್ಣ ವಿಧಾನಸೌಧ

'ಪದ್ಮವಿಭೂಷಣ' ಪುರಸ್ಕೃತ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸರ್ಕಾರದ ಮಾಜಿ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ವಿಧಾನ ಪರಿಷತನಲ್ಲಿ ಸಂತಾಪ ಸೂಚಿಸಲಾಯಿತು.

ಎರಡನೇ ದಿನದ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು, ಎಸ್ ಎಂ ಕೃಷ್ಣ ಅವರ ನಿಧನರಾಗಿರುವ ವಿಷಯವನ್ನು ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ ಎಂದು ಸಂತಾಪ ಸೂಚನೆಯ ವಿಷಯವನ್ನು ಪ್ರಕಟಿಸಿದರು.

ಮಿತಭಾಷಿ, ಸೌಮ್ಯ ರಾಜಕಾರಣಿ ಹಾಗೂ ಅಜಾತಶತ್ರುಗಳಾಗಿದ್ದ ಎಸ್ ಎಂ ಕೃಷ್ಣ ಅವರ ನಿಧನದಿಂದಾಗಿ ರಾಷ್ಟ ಹಾಗೂ ರಾಜ್ಯವು ಒಬ್ಬ ಶ್ರೇಷ್ಠ ರಾಜಕೀಯ ಮುತ್ಸದ್ದಿಯನ್ನು ಕಳೆದುಕೊಂಡಂತಾಗಿದೆ ಎಂದು

ಸಂತಾಪ ಸೂಚನೆಯ ನಿರ್ಣಯದ ಪ್ರಸ್ತಾವವನ್ನು ಸದನಕ್ಕೆ ಓದಿ ಹೇಳಿದರು.

ಬಳಿಕ ಸಭಾ ನಾಯಕರು ಮತ್ತು ಸಚಿವರಾದ ಎನ್ ಎಸ್ ಬೋಸರಾಜು ಅವರು ಮಾತನಾಡಿ, ಎಸ್ ಎಂ ಕೃಷ್ಣ ಅವರು ತಮ್ಮ ಆಡಾಳಿತಾವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದರು. ನೀರಾವರಿ,

ರೈತರ ಸಮಸ್ಯೆಗಳು ಎದುರಾದಾಗ ಅಂತಹ ಸವಾಲುಗಳನ್ನು ಸಮರ್ಥವಾಗಿ ನಿಬಾಯಿಸಿದರು. ಕೆರೆ ಅಭಿವೃದ್ಧಿಗೆ ಸಾಕಷ್ಟು ಒತ್ತು ಕೊಟ್ಟಿದ್ದರು. ಬಡ ಮಕ್ಕಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಆರಂಭಿಸಿದರು. ಮಹಿಳೆಯರ ಅನುಕೂಲಕ್ಕಾಗಿ ಸ್ತ್ರೀಶಕ್ತಿ ಗುಂಪುಗಳನ್ನು ಆರಂಭಿಸಿದರು.

ಅವರ ವಿಚಾರ, ದೂರದೃಷ್ಟಿ ರಾಜ್ಯದ ಬೆಳವಣಿಗೆಗೆ ಸಾಕಷ್ಟು ಅನುಕೂಲವಾಯಿತು ಎಂದು ತಿಳಿಸಿದರು.

ಬಳಿಕವಿರೋಧಪಕ್ಷದನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಎಸ್ ಎಂ ಕೃಷ್ಣ ಅವರು ದೂರದೃಷ್ಟಿ ಹೊಂದಿದ ನಾಯಕರಾಗಿದ್ದರು. ಹಿರಿಯರು ಕಿರಿಯರು ಎನ್ನದೇ ಎಲ್ಲರಿಗೂ ಗೌರವ ಕೊಡುತ್ತಿದ್ದರು. ಯುವಕರು ಬೆಳೆಯಬೇಕು ಎಂದು ಬಯಸುತ್ತಿದ್ದರು. ಅವರ ಅಗಲಿಕೆ ರಾಜ್ಯ ಹಾಗೂ ರಾಷ್ಟ್ರಕ್ಕೆ ದೊಡ್ಡ ನಷ್ಟ ಎಂದು ತಿಳಿಸಿದರು.

ಸಭಾ ನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮತ್ತು ಇನ್ನಿತರ ಸದಸ್ಯರು ಎಸ್ ಎಂ ಕೃಷ್ಣ ಅವರೊಂದಿಗಿನ ಒಡನಾಟವನ್ನು ಹಂಚಿಕೊಂಡರು. ರಾಜ್ಯ ಮತ್ತು ರಾಷ್ಟ್ರಕ್ಕೆ ನೀಡಿದ ಸೇವೆಯನ್ನು ಸ್ಮರಿಸಿದರು.

ಎಸ್ ಎಂ ಕೃಷ್ಣ: ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅವರು 1932ರ ಮೇ 01 ರಂದು ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಸೋಮನಹಳ್ಳಿಯಲ್ಲಿ ಜನಿಸಿದರು.

ಶ್ರೀಯುತರು ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ಪ್ರೌಢ ಶಿಕ್ಷಣ, ಮೈಸೂರಿನ ಮಹಾರಾಜ ಕಾಲೇಜಿನಿಂದ ಬಿ.ಎ. ಪದವಿ, ಬೆಂಗಳೂರು ಸರ್ಕಾರಿ ಕಾನೂನು ಕಾಲೇಜಿನಿಂದ, ಟೆಕ್ಸಾಸ್‌ನ ಸದರನ್ ಮೆಥೋಡಿಸ್ಟ್ ವಿಶ್ವವಿದ್ಯಾಲಯ ಹಾಗೂ ಜಾರ್ಜ್ ವಾಶಿಂಗ್ಟನ್‌ನ ಲಾ ಕಾಲೇಜಿನಿಂದ ಕಾನೂನು ಪದವಿ ಪಡೆದರು. ಬೆಂಗಳೂರಿನ ರೇಣುಕಾಚಾರ್ಯ ಕಾನೂನು ಕಾಲೇಜಿನಲ್ಲಿ ಅಂತರಾಷ್ಟ್ರೀಯ ನ್ಯಾಯ ಶಾಸ್ತ್ರದ ಉಪನ್ಯಾಸಕರಾಗಿಯೂ ಸೇವೆ ಸಲ್ಲಿಸಿದ್ದರು.

1962ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಆಯ್ಕೆಯಾಗುವ ಮೂಲಕ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದ ಶ್ರೀಯುತರು 4, 5 ಮತ್ತು 7ನೇ ಲೋಕಸಭೆಯ ಸದಸ್ಯರಾಗಿ, 1972–77ರವರೆಗೆ ವಿಧಾನ ಪರಿಷತ್ತಿನ ಸದಸ್ಯರಾಗಿ, 1996– 1999ರವರೆಗೆ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು 1989–1993ರ ಅವಧಿಯಲ್ಲಿ ವಿಧಾನಸಭೆಯ ಸಭಾಧ್ಯಕ್ಷರಾಗಿ, 1993–1994ರಲ್ಲಿ ಮೊದಲ ಉಪ ಮುಖ್ಯಮಂತ್ರಿಯಾಗಿ, 1999–2004ರವರೆಗೆ ಕರ್ನಾಟಕ ರಾಜ್ಯದ ಮುಖ್ಯ ಮಂತ್ರಿಯಾಗಿ, 2004 ರಿಂದ 2008ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿ ಕಾರ್ಯನಿರ್ವಹಿಸಿದ್ದರು.

ಕೇಂದ್ರ ಸರ್ಕಾರದಲ್ಲಿ ವಾಣಿಜ್ಯ ಕೈಗಾರಿಕೆಗಳು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ, ಹಣಕಾಸು ಖಾತೆ ರಾಜ್ಯ ಸಚಿವರಾಗಿ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವರಾಗಿ ವಿವಿಧ ಹುದ್ದೆಗಳಲ್ಲಿ ಸ್ಮರಣೀಯವಾಗಿ ಜನ ಸೇವೆಯನ್ನು ಸಲ್ಲಿಸಿರುತ್ತಾರೆ. ವಿಶ್ವಭೂಪಟದಲ್ಲಿ ಬೆಂಗಳೂರು ನಗರದ ಚಿತ್ರಣ ಬದಲಿಸಿ ಬೆಂಗಳೂರನ್ನು "ಸಿಲಿಕಾನ್ ಸಿಟಿ"ಯಾಗಿ ಪರಿವರ್ತಿಸಿದ ಹರಿಕಾರರಾಗಿದ್ದ ಶ್ರೀಯುತರು ಕರ್ನಾಟಕಕ್ಕೆ ಜಾಗತಿಕ ಮಟ್ಟದಲ್ಲಿ ಹೆಸರನ್ನು ತಂದವರು. ತಾಲ್ಲೂಕು ಮಟ್ಟದಲ್ಲಿ "ಭೂಮಿ" ತಂತ್ರಜ್ಞಾನವನ್ನು ಜಾರಿ ತರುವ ಮೂಲಕ ಡಿಜಿಟಲೀಕರಣಕ್ಕೆ ನಾಂದಿ ಹಾಡಿದ ಕೀರ್ತಿಗೆ ಭಾಜನರಾಗಿದ್ದಾರೆ.

ಶ್ರೀಯುತರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ, ಅಧ್ಯಯನಶೀಲ ಪ್ರವೃತ್ತಿ ಹಾಗೂ ವ್ಯಕ್ತಿತ್ವವು ಉದಯೋನ್ಮುಖ ರಾಜಕಾರಣಿಗಳಿಗೆ ಸ್ಫೂರ್ತಿದಾಯಕವಾಗಿದೆ. ಶ್ರೀಯುತರು ರಾಷ್ಟ್ರ ಮತ್ತು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆಗಾಗಿ ಪದ್ಮವಿಭೂಷಣ ಪ್ರಶಸ್ತಿಗೆ ಭಾಜನರಾಗಿರುತ್ತಾರೆ.

## ಶಾಂತಿಸಾಗರದಿಂದ ಕುಡಿಯುವ ನೀರನ್ನು ತರಲು ಸಹಾಯ ಮಾಡಿದ ವ್ಯಕ್ತಿ ಕೃಷ್ಣ

» ಚಿತ್ರದುರ್ಗ

ಒಂದು ಕಾಲದಲ್ಲಿ ಕುಡಿಯುವ ನೀರಿನಸಮಸ್ಯೆಯಿಂದಬಳಲುತ್ತಿದ್ದ ಚಿತ್ರದುರ್ಗಕ್ಕೆ ಶಾಂತಿಸಾಗರದಿಂದ ಕುಡಿಯುವ ನೀರನ್ನು ತರಲು ಸಹಾಯ ಮಾಡಿದ ಮಹಾನ್ ವ್ಯಕ್ತಿ ಎಸ್.ಎಂ.ಕೃಷ್ಣ ಎಂದು ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಸ್ಮರಣೆ ಮಾಡಿದರು.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರವರ ನಿಧನದ ಹಿನ್ನಲೆಯಲ್ಲಿ ಚಿತ್ರದುರ್ಗ ನಗರದಲ್ಲಿ ಮಂಗಳವಾರ ಪ್ರವಾಸಿ ಮಂದಿರದಲ್ಲಿ ತಮ್ಮ ಬೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು 2004ರಲ್ಲಿ ನಾನು ವಿಧಾನಸಭಾ ಚುನಾವಣೆಯಲ್ಲಿ ಪಕ್ಷೇತರರಾಗಿ ಸ್ಪರ್ದೆ ಮಾಡಿ ವಿಧಾನಸಭೆಯನ್ನು ಪ್ರವೇಶ ಮಾಡಿದ್ದ ಸಮಯದಲ್ಲಿ ಒಂದು ರಾತ್ರಿ ಬೆಂಗಳೂರಿನಿಂದ ವಾಪಾಸ್ ಆಗುವ ಸಮಯದಲ್ಲಿ ಚಿತ್ರದುರ್ಗದಲ್ಲಿ ರಾತ್ರಿ 10 ರ ಸಮಯದಲ್ಲಿ ಗಾಂಧಿವೃತ್ತದಲ್ಲಿ ನೂರಾರು ಮಹಿಳೆಯರು ಖಾಲಿ ಕೊಡಗಳನ್ನು ಹಿಡಿದು ನೀರಿಗಾಗಿ ಹೋರಾಟವನ್ನು ಮಾಡುತ್ತಿದ್ದರು ಇದರಿಂದ ಚಿತ್ರದುರ್ಗ ನಗರದ ನೀರಿನ ಸಮಸ್ಯೆಯನ್ನು ಪರಿಹಾರ ಮಾಡಬೇಕೆಂದು ತೀರ್ಮಾನ ಮಾಡಿ ಸದನ ಸಮಿತಿಯಲ್ಲಿ ಹೈದರಾಬಾದ್‌ನಲ್ಲಿ ಪ್ರವಾಸ ಇದ್ದಾಗ ಆಗ ಮುಖ್ಯಮಂತ್ರಿಯಾಗಿದ್ದ ಎಸ್.ಎಂ.ಕೃಷ್ಣರವರು ದೆಹಲಿ ಪ್ರವಾಸ ಎಂದು ಮಾಹಿತಿ ಬಂದಾಗ ಅವರನ್ನು ಬೇಟಿ ಮಾಡಲು ದೆಹಲಿಗೆ ಹೋಗಿ ಅಲ್ಲಿ ಅವರನ್ನು ಬೇಟಿ ಮಾಡಿ ಚಿತ್ರದುರ್ಗದ ನೀರಿನ ಸಮಸ್ಯೆಯನ್ನು ತಿಳಿಸಿದಾಗ ಅಲ್ಲಿಂದಲೇ ದೂರವಾಣಿ ಮೂಲಕ ರಾಜ್ಯದ ಮುಖ್ಯ ಕಾರ್ಯದರ್ಶಿಗಳನ್ನು ಸಂಪರ್ಕ ಮಾಡಿ ಈ ವಿಷಯವನ್ನು ಸಚಿವ ಸಂಪುಟಕ್ಕೆ ತರುವಂತೆ ನಿರ್ದೇಶನ ನೀಡಿದರು.

ಎಸ್ ಎಂ.ಕೃಷ್ಣ ರವರು ಚಿತ್ರದುರ್ಗದ ಕುಡಿಯುವ ನೀರಿನ ಕಾಮಗಾರಿಗೆ ಅನುಮತಿಯನ್ನು ನೀಡದಿದ್ದರೆ ಈ ವೇಳೆ ಚಿತ್ರದುರ್ಗ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬೇಕಿತ್ತು ಅಂದಿನ ಕಾಲದಲ್ಲಿ ನೀರಿಲ್ಲ ಎಂದು ಮನೆಗಳು ಬಾಡಿಗೆ ಹೋಗುತ್ತಿರಲಿಲ್ಲ ಇದ್ದಲ್ಲದೆ ಕುಡಿಯಲು ನೀರಿಲ್ಲ ನೀರು ತರಲು ದೂರ ಕೊಡವನ್ನು ಹಿಡಿದು ತಮ್ಮ ಮಗಳು ಹೋಗಬೇಕೆಂದು ಚಿತ್ರದುರ್ಗದ ಯುವಕರಿಗೆ ಹೆಣ್ಣನ್ನು ಕೊಡುತ್ತಿರಲ್ಲಿಲ್ಲ ಇಂತಹ ಪರಿಸ್ಥಿತಿ ಇತ್ತು. ಅಂದು ಕೃಷ್ಣ ರವರು ಮನಸ್ಸು ಮಾಡದಿದ್ದರೆ ಚಿತ್ರದುರ್ಗ ಕುಡಿಯುವ ನೀರಿನ ಸಮಸ್ಯೆ ಯಿಂದ ಬಳಲಬೇಕಿತ್ತು ಎಂದು ಅವರು ಮಾಡಿದ ಕಾರ್ಯವನ್ನು ಜಿ.ಎಚ್.ತಿಪ್ಪಾರೆಡ್ಡಿ ಸ್ಮರಣೆ ಮಾಡಿದರು.

ಸಚಿವ ಸಂಪುಟದಲ್ಲಿ ಚಿತ್ರದುರ್ಗಕ್ಕೆ ಕುಡಿಯುವ ನೀರಿನ ಯೋಜನೆ ಮಂಜೂರಾದಾಗ ಅಂದಿನ ಸಚಿವರಾಗಿದ್ದ ರಂಗನಾಥ್ ರವರು ಸಚಿವ ಸಂಪುಟದ ಸಭೆಯಿಂದ ಹೊರ ಬಂದು ನನಗೆ ಶುಭಾಷಯವನ್ನು ತಿಳಿಸಿ ಚಾನ್ಸ್ ಹೊಡೆದು ಅಗ ಅಂಧಿನ ಸಮಯದಲ್ಲಿ ಅದು ದೊಡ್ಡದಾದ ಮೊತ್ತವಾಗಿತ್ತು ಎಂದ ಅವರು ಎಸ್.ಎಂ.ಕೃಷ್ಣರವರು ಮುಖ್ಯಮಂತ್ರಿಯಾಗಿದ್ದಾಗ ಮತ್ತು ಅದಕ್ಕೂ ಮೊದಲು ಚಿತ್ರದುರ್ಗಕ್ಕೆ ಹಲವಾರು ಬಾರಿ ಆಗಮಿಸಿ ವಿವಿಧ ರೀತಿಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು ಎಂದು ತಿಳಿಸಿದರು.

## ಕೃಷ್ಣ ಪ್ರಾರ್ಥಿವ ಶರೀರಕ್ಕೆ ಶಾಸಕರಾದ ಗೋವಿಂದಪ್ಪ, ರಘುಮೂರ್ತಿ ನಮನ




» ಹೊಸದುರ್ಗ

ಮಂಗಳವಾರ ನಿಧನರಾದ ಮಾಜಿ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ.ಕೃಷ್ಣರವರ ಪ್ರಾರ್ಥಿವ ಶರೀರವನ್ನು ಹೊಸದುರ್ಗದ ಶಾಸಕ ಬಿ.ಜಿ.ಗೋವಿಂದಪ್ಪ ಹಾಗೂ ಮತ್ತೋರ್ವ ಶಾಸಕ ಟಿ.ರಘುಮೂರ್ತಿ ಅವರು ದರ್ಶನ ಪಡೆದು, ಅಂತಿಮ ನಮನ ಸಲ್ಲಿಸಿದರು.

ಈ ಸಂಧರ್ಬದಲ್ಲಿ ಮಾತನಾಡಿದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಅಧ್ಯಕ್ಷರು ಹಾಗೂ ಶಾಸಕರಾದ ಬಿ.ಜಿ.ಗೋವಿಂದಪ್ಪ ನನ್ನ ರಾಜಕೀಯ ಬೆಳವಣಿಗೆಯ ಆರಂಭದ ದಿನಗಳಲ್ಲಿ ಮಾರ್ಗದರ್ಶಕರಾಗಿ ನಿಂತು, ಕ್ಷೇತ್ರದ ಅಭಿವೃದ್ಧಿಗೆ ಸದಾಕಾಲಾ ಬೆಂಬಲ ನೀಡಿ ಹೊಸದುರ್ಗ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಿದ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳು ಹಾಗೂ ದೂರದೃಷ್ಟಿಯ ಧೀಮಂತ ನಾಯಕರಾದ ಎಸ್.ಎಂ.ಕೃಷ್ಣ ಅವರ ಅಗಲಿಕೆಯ ಸುದ್ದಿ ಬಹಳ ನೋವಿನ ಸಂಗತಿಯಾಗಿದ್ದು, ಅವರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದ ಅವರು ಮುಖ್ಯಮಂತ್ರಿಗಳಾಗಿ ರಾಜ್ಯವನ್ನು ಮುನ್ನೆಡಿಸಿದ ಆಡಳಿತದಲ್ಲಿ ನಾನು ಕೂಡ ಶಾಸಕರಾಗಿ ಕಾರ್ಯ ನಿರ್ವಹಿಸಿರುವುದು ನನ್ನ ಜೀವನದ ಸಾರ್ಥಕ ಪಯಣ ಎಂದರು.

## ಫಾಸ್ಟ್ ನ್ಯೂಸ್

### ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ಯೋಜನೆಯಡಿ ಬಿ.ಎಡ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ವೆಬ್‌ಸೈಟ್: https://sevasindhu.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು, ಅರ್ಜಿ ಸಲ್ಲಿಸಲು ಡಿಸೆಂಬರ್ 25 ಕೊನೆಯದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ವೆಬ್‌ಸೈಟ್: Website: https://dom.karnataka.gov.inನಲ್ಲಿ ಪಡೆಯಬಹುದು. ಹಾಗೂ ಅಲ್ಪಸಂಖ್ಯಾತರ ಜಿಲ್ಲಾ ಕಛೇರಿ ದೂ.ಸಂ: 08192-250022 ಸಂಪರ್ಕಿಸಬಹುದು.

### ಆಯ್ಕೆ ಪ್ರಕ್ರಿಯೆ ಮೂಂದೂಡಿಕೆ

» **ದಾವಣಗೆರೆ**

2024-25ನೇ ಸಾಲಿನ ದಾವಣಗೆರೆ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆಯ ಕಾರ್ಯಕ್ರಮವನ್ನು ಶೋಕಾಚರಣೆ ಪ್ರಯುಕ್ತ ಡಿಸೆಂಬರ್ 14 ಕ್ಕೆ ಮೂಂದೂಡಲಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ತಿಳಿಸಿದ್ದಾರೆ.

### “ಸಾಹಿತ್ಯದಿಂದ ಈ ನೆಲದ ಸಾಂಸ್ಕೃತಿಕ ಬದುಕು ಕಟ್ಟುವ ಕೆಲಸ ಆಗಬೇಕು”



» **ಹೊಸದುರ್ಗ**

ಸಾಹಿತ್ಯದಿಂದ ಈ ನೆಲದ ಸಾಂಸ್ಕೃತಿಕ ಬದುಕು ಕಟ್ಟುವ ಕೆಲಸ ಆಗಬೇಕು ನೆಲ ಜಲ , ಸಂರಕ್ಷಣೆ . ವಿದ್ಯಾರ್ಥಿ ದಿಸೆಯಿಂದಲೇ ಅದು ಆಗಬೇಕು, ನೆಲ ಮೂಲದ ಕವಿ ಬಿಳಿಗೆರೆ ಕೃಷ್ಣಮೂರ್ತಿ ಅವರ ಭೂಮಂತ್ರಯ್ಯನ ಕಥೆಗಳು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಬಂದಿರುವುದು ಹೆಮ್ಮೆಯ ವಿಷಯ ಪ್ರತಿ ಶಾಲಾ ಕಾಲೇಜುಗಳಲ್ಲಿ ನಾಡಿನ ಕವಿ ,ಕಾವ್ಯ ,ಕಥೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಕೆಲಸವನ್ನು ಹೆಜ್ಜೆ ಸಾಲು ಸಾಂಸ್ಕೃತಿಕ ವೇದಿಕೆ ಮಾಡುತ್ತಿದೆ ಎಂದು ಹೆಜ್ಜೆ ಸಾಲು ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷ ಗೋ. ತಿಪ್ಪೇಶ್ ತಿಳಿಸಿದರುತಾಲೂಕಿನ ಶ್ರೀರಾಂಪುರ ಹೋಬಳಿಯ ನಾಯಿಗೆರೆ ಬಳಿ ಇರುವ ಇಂದಿರಾ ಗಾಂಧಿ ವಸತಿಯುತ ಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ಬಿಳಿಗೆರೆ ಕೃಷ್ಣಮೂರ್ತಿ ಅವರ ಭೂಮಂತ್ರಯ್ಯನ ಕಥೆಗಳು ಕುರಿತು ವಿದ್ಯಾರ್ಥಿಗಳೊಂದಿಗೆ ನಡೆಸಿದ ಚಿಂತನ - ಮಂಥನ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಹಿರಿಯ ಸಾಹಿತಿ ಪಿ.ಎಲ್.ಲೋಕೇಶ್ವರ್ ಮಾತನಾಡಿ ತಾಲ್ಲೂಕಿನಲ್ಲಿ ಸಾಹಿತ್ಯ ಕವಿ ಕಾವ್ಯ ,ಕಥೆಗಳ ಕುರಿತು ,ಚಿಂತನ-ಮಂಥನ ಕಾರ್ಯಕ್ರಮಗಳು ಬಹಳಷ್ಟು ಕಡಿಮೆ ಆಗುತ್ತಿದ್ದು ಹೆಜ್ಜೆ ಸಾಲು ಸಾಂಸ್ಕೃತಿಕ ವೇದಿಕೆಯ ತಂಡ ಅತ್ಯುತ್ತಮ ವಾದ ಕಾರ್ಯಕ್ರಮ ಕ್ರಮ ನಿಜಕ್ಕೂ ಶ್ಲಾಘನೀಯ ಎಂದರು.ಭೂಮಂತ್ರಯ್ಯನ ಕಥೆಗಳು ಕುರಿತು ಹುಳಿಯಾರ್‌ನ ಸಾಹಿತಿ ಕಿರಣ್‌ಕುಮಾರ್ ಮಾತನಾಡಿ ಬಿಳಿಗೆರೆ ಕೃಷ್ಣಮೂರ್ತಿ ಅವರ ಭೂಮಂತ್ರಯ್ಯನ ಕಥೆಗಳು ಬಹಳ ಅಪರೂಪದ ಕಥೆಗಳು ಎಂದರು. ಭೂಮಂತ್ರಯ್ಯನ ಕಥೆಗಳ ಕೃತಿ ರಚನೆಕಾರ ಬಿಳಿಗೆರೆ ಕೃಷ್ಣಮೂರ್ತಿ ಮಾತನಾಡಿ ಭೂಮಂತ್ರಯ್ಯನ ಕಥೆಗಳ ಪ್ರೀತಿಯ ಪಾತ್ರ ಅಂತ:ಕರಣದ ನುಡಿ ,ಗ್ರಾಮೀಣ ಕೃಷಿ ನಾಡಿ ಮಿಡಿತ ವನ್ನು ಮಾತನಾಡಿಸಿ ನಮ್ಮ ನೆಲದ ಸಾವಯ ಕೃಷಿಯ ಬದುಕು ಮರೆತರೆ ನಾವು ವಿನಾಶದ ಅಂಚಿಗೆ ಹೋಗುತ್ತೇವೆ ವೈಜ್ಞಾನಿಕತೆಯ ಜೊತೆ ಜೊತೆಗೆ ನಮ್ಮ ಕೃಷಿ ಯ ಕಡೆ ಮತ್ತೆ ಬರಬೇಕಾಗಿದೆ, ಅದು ವಿದ್ಯಾರ್ಥಿ ದಿಸೆಯಿಂದಲೆ ಬರಬೇಕು ಎಂದರು. ಇಂದಿರಾಗಾಂಧಿ ವಸತಿಯುತ ಶಾಲೆಯ ಪ್ರಾಚಾರ್ಯ ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಸಾಹಿತಿ ನಾಗತಿಹಳ್ಳಿಮಂಜುನಾಥ್, ಹೊಸದುರ್ಗದ ಕವಿ ನಿಸಾರ್‌ಅಹಮದ್, ಕವಿಯಿತ್ರಿ ಕುಮಾರಿ ಎಂ.ಆರ್.ನಳಿನ ನಿವೃತ್ತ ಶಿಕ್ಷಕ ರಾಜಪ್ಪ , ಕಲಾವಿದ ಪೀಲಾಪುರ ಆರ್.ಕಂಠೇಶ್, ಭರತ್, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಉಪಸ್ಥಿತರಿದ್ದರು. ಶಾಲೆಯ ಹಲವು ವಿದ್ಯಾರ್ಥಿಗಳು ಭೂಮಂತ್ರಯ್ಯನ ಕಥೆಗಳು ಕುರಿತು ಅದ್ಭುತವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ನಾಡಿನ ಮುತ್ಸದ್ದಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ರವರ ನಿಧನಕ್ಕೆ ಅವರ ಆತ್ಮಕ್ಕೆ ಶಾಂತಿ ಕೋರಿ ಸಂತಾಪ ಸೂಚಿಸಲಾಯಿತು.

# ಬೇರೊಬ್ಬರ ಹಕ್ಕಿಗೆ ಚ್ಯುತಿ ಬಾರದಂತೆ ಬದುಕುವುದೇ ಮಾನವ ಹಕ್ಕು ಪಾಲನೆ; ರಾಜೇಶ್ವರಿ ಎನ್.ಹೆಗಡೆ

» **ದಾವಣಗೆರೆ**

ಮನುಷ್ಯ ಹುಟ್ಟಿನಿಂದ ಸಾಯುವವರೆಗೂ ಬೇರೊಬ್ಬರಹಕ್ಕಿಗೆಚ್ಯುತಿಉಂಟುಮಾಡದೇ, ಗೌರವದಿಂದ ಬದುಕುವುದೇ ಮಾನವ ಹಕ್ಕು ಪಾಲನೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ. ಎನ್ ಹೆಗಡೆ ಹೇಳಿದರು.

ಮಂಗಳವಾರ(ಡಿ.10) ರಂದು ನಗರದ ಆರ್.ಎಲ್.ಕಾನೂನು ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್‌ಲಾ ಕಾನೂನು ಸೇವಾ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಅಂತರಾಷ್ಟ್ರೀಯ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾನವ ಹಕ್ಕುಗಳ ದಿನಾಚರಣೆಯ ಪ್ರತಿಜ್ಞಾ ವಿಧಿ ಬೋಧಿಸಿ, ಮಾತನಾಡಿದರು.

ಎರಡನೆ ಮಹಾಯುದ್ಧದ ಸಂದರ್ಭದಲ್ಲಿ ಜಾಗತಿಕವಾಗಿ ನಡೆದ ಸಾಮೂಹಿಕ ಹತ್ಯೆ, ಅನಾಗರೀಕ ಕೃತ್ಯಗಳ ಪರಿಣಾಮವಾಗಿ 1948 ರ ಡಿಸೆಂಬರ್ 10 ರಲ್ಲಿ ವಿಶ್ವಸಂಸ್ಥೆ ಮಾನವ ಹಕ್ಕುಗಳ ರಕ್ಷಣೆಗಾಗಿ ನೀತಿಯನ್ನು ಘೋಷಣೆ ಮಾಡಿತು. ಅಂದಿನಿಂದ ಈವರೆಗೂ ಮಾನವ ಹಕ್ಕುಗಳ ರಕ್ಷಣೆಯ ವಿಷಯ ಹಲವು ಮಜಲುಗಳನ್ನು ಕಂಡಿದೆ. ಆದರೂ ಸಹ ಈಗಲೂ ಮಾನವ ಹಕ್ಕುಗಳ ಉಲ್ಲಂಘನೆ ನಿತ್ಯ ನಡೆಯುತ್ತಿರುವುದು ಬೇಸರದ ಸಂಗತಿಯಾಗಿದೆ. ಕಷ್ಟಗಳಿಗೆ ಸ್ಪಂದಿಸದಿರುವುದು ಕೂಡ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ನಮ್ಮ ಸುತ್ತಮುತ್ತಲು ಇಂತಹ ಉಲ್ಲಂಘನೆ ಕಂಡುಬಂದಾಗ, ಇದರ ವಿರುದ್ಧ ನಾವು ಧ್ವನಿ ಎತ್ತಬೇಕು. ಇಂತಹ ಕೃತ್ಯಗಳನ್ನು ತಡೆಯುವ ಮೂಲಕ ಹಕ್ಕುಗಳ ರಕ್ಷಣೆಗೆ ಮುಂದಾಗಬೇಕು ಎಂದರು.



ವಕೀಲ ವೃತ್ತಿಯಲ್ಲಿ ಒಂದು ರೀತಿ ಹೋರಾಟ, ಕಠಿಣ ತಪಸ್ಸನ್ನು ಮಾಡಬೇಕಾಗುತ್ತದೆ. ನಮ್ಮಲ್ಲಿರುವ ಕೀಳರಿಮೆ ಬಿಟ್ಟು ಸಮಾಜಮುಖಿಯಾದರೆ ಯಾವುದೇ ಕೆಲಸದಲ್ಲಿ ಯಶಸ್ಸು ಸಾಧ್ಯವಾಗುತ್ತದೆ ಎಂದರು.

ಹಿರಿಯಸಿವಿಲ್‌ನ್ಯಾಯಾಧೀಶರುಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ. ಮ.ಕರೆಣ್ಣನವರ್ ಮಾತನಾಡಿ, ಬಾಲ ಕಾರ್ಮಿಕ ಮತ್ತು ಬಾಲ್ಯವಿವಾಹದಂತಹ ಪದ್ದತಿಗಳು ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ಸಾರ್ವಜನಿಕರು ನೈತಿಕತೆಯಿಂದ ನಡೆದುಕೊಳ್ಳಬೇಕು. ಬಾಲಕಾರ್ಮಿಕ ಪದ್ಧತಿ, ಜೀತಪದ್ಧತಿ, ಮಾನವ ಕಳ್ಳಸಾಗಣೆ, ಲೈಂಗಿಕ ಕಿರುಕುಳ, ಹೆಚ್‌ಐವಿ ಸೋಂಕಿತರಿಗೆ ಮಾಡಲಾಗುವ ತಾರತಮ್ಯ ಇವೆಲ್ಲವೂ ಮಾನವ ಹಕ್ಕುಗಳ ಉಲ್ಲಂಘನೆಯೇ ಆಗಿದೆ. ಮಾನವ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದ ಹೆಚ್ಚಿನ ಪ್ರಕರಣಗಳು ಸಾಮಾನ್ಯವಾಗಿ ಪೊಲೀಸ್ ಇಲಾಖೆ ವಿರುದ್ಧವೇ ದಾಖಲಾಗುತ್ತವೆ. ಇತರರೊಂದಿಗೆ ಅಗೌರವವಾಗಿ, ಮನುಷ್ಯತ್ವ ಮರೆತು ಕ್ರೂರ ರೀತಿಯಲ್ಲಿ ವರ್ತಿಸುವುದು ಸರಿಯಲ್ಲ. ಮಾನವರಾದ ಎಲ್ಲರನ್ನೂ ಕಾನೂನು ಸಮಾನವಾಗಿಯೇ ನೋಡುತ್ತದೆ ಎಂದರು.

ಮಾನವ ಹಕ್ಕುಗಳಿಗೆ ಸುಧೀರ್ಘವಾದ ಇತಿಹಾಸವಿದೆ, ಕ್ರಿಸ್ತಪೂರ್ವದಿಂದಲೂ ಮಾನವ ಹಕ್ಕುಗಳಿಗಾಗಿ ಹೋರಾಟವನ್ನು ನಡೆಸಲಾಗಿದೆ. ಆಳುವವರ ಮತ್ತು ಆಳಿಸಿಕೊಳ್ಳುವವರ ನಡುವಿನ ಸಂಘರ್ಷದಿಂದ ಮಾನವ ಹಕ್ಕುಗಳು ಹುಟ್ಟಿಕೊಂಡಿವೆ. ಪ್ರಸ್ತುತ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲೂ ಮಾನವ ಹಕ್ಕುಗಳ ಉಲ್ಲಂಘನೆ ಯಾಗುತ್ತಿರುವುದು ಬೇಸರದ ಸಂಗತಿ ಎಂದು ತಿಳಿಸಿದರು.

ವಕೀಲರಾದ ಎಲ್.ಹೆಚ್. ಅರುಣಕುಮಾರ್ ಮಾತನಾಡಿ, ಮನುಷ್ಯ, ಮನುಷ್ಯನನ್ನು ಗೌರವಿಸಬೇಕು. ಮಾನವ ದೇವರಾಗುವುದು ಸುಲಭ. ಆದರೆ ಮನುಷ್ಯ ಮನುಷ್ಯನಾಗುವುದು ಕಷ್ಟವಾಗಿದೆ, ಈ ಮನಸ್ಥಿತಿ ಬದಲಾಗಬೇಕು. ಎಲ್ಲರೂ ಮಾನವ ಹಕ್ಕುಗಳನ್ನು ಗೌರವಿಸಬೇಕು. ಮಾನವ ಹಕ್ಕುಗಳು ಅನೇಕ ಉದ್ದೇಶಗಳನ್ನು ಹೊಂದಿದೆ. ಮಾನವ ಪ್ರಪಂಚದಲ್ಲಿ ಮುಕ್ತವಾಗಿ ಜೀವಿಸುವ ಮತ್ತು ಬೇಧ-ಭಾವವಿಲ್ಲದೇ ಬದುಕುವ ಹಕ್ಕು ಹೊಂದಿದ್ದಾರೆ. ಯಾರ ಗುಲಾಮಗಿರಿಯಲ್ಲೂ ಇರದೇ, ಸ್ವತಂತ್ರರಾಗಿ ಜೀವಿಸಬೇಕು. ಹಿಂಸೆ ಮತ್ತು ಅಮಾನವೀಯವಾಗಿ ಬೇರೊಬ್ಬರಿಂದ ಶಿಕ್ಷೆಗೆ ಒಳಗಾಗದಂತೆ ಜೀವಿಸುವ ಹಕ್ಕುಗಳು ಸೇರಿದಂತೆ ವಿವಿಧ ಉದ್ದೇಶವನ್ನು ಇದು ಹೊಂದಿದೆ ಎಂದು ತಿಳಿಸಿದರು.

ಆರ್.ಎಲ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಎಸ್.ಯತೀಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಧಾರವಾಡ ಹೊಸತು ಮಾಸ ಪತ್ರಿಕೆಯ ಸಂಪಾದಕರಾದ ಡಾ.ಸಿದ್ದನಗೌಡ ಪಾಟೀಲ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ, ವಕೀಲರಾದ ಹನುಮಂತಪ್ಪ, ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನಿಷ್ಕಳಂಕ ರಾಜಕಾರಣಿ ಎಸ್.ನಿಜಲಿಂಗಪ್ಪ

» **ಚಿತ್ರದುರ್ಗ**

ಮಹನೀಯರ ವಿಚಾರಗಳನ್ನು ಸಮಾಜಕ್ಕೆ ತಿಳಿಸದಿದ್ದರೆ ಅದುವೆ ಸಾಂಸ್ಕೃತಿಕ ದರಿದ್ರವೆಂದು ಎಸ್.ಜೆ.ಎಂ. ಬೃಹನ್ಮಠ ಹಾಗೂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯ ಬಸವಕುಮಾರ ಸ್ವಾಮೀಜಿ ಹೇಳಿದರು.

ಸೀಬಾರದಲ್ಲಿರುವ ಎಸ್.ಎನ್.ರವರ ಸ್ಮಾರಕದ ಸಮೀಪ ಮಂಗಳವಾರ ಎಸ್.ನಿಜಲಿಂಗಪ್ಪನವರ 123 ನೇ ಜನ್ಮದಿನದ ಸಾನಿಧ್ಯ ವಹಿಸಿ ಮಾತನಾಡಿದರು.

ಕರ್ನಾಟಕ ಏಕೀಕರಣದ ರುವಾರಿಯಾಗಿದ್ದ ಎಸ್.ನಿಜಲಿಂಗಪ್ಪನವರು ಮುರುಘಾಮಠದ ಪಾರಂಪರಿಕ ಭಕ್ತರಾಗಿದ್ದರು. ಜಯದೇವ ಜಗದ್ಗುರುಗಳ ಜೊತೆ ಅವಿನಾಭಾವ ಸಂಬಂಧವಿತ್ತು. ಅಪರೂಪದ ರಾಜಕಾರಣಿ. ಕನ್ನಡ ನಾಡು, ನುಡಿಗೆ ಅಪಾರ ಕೊಡುಗೆ ನೀಡಿದ್ದಾರೆಂದು ಸ್ಮರಿಸಿದರು.

ನೇರ, ನಿಷ್ಟುರವಾದಿ, ನಿಷ್ಕಳಂಕ ರಾಜಕಾರಣಿಯಾಗಿದ್ದ ಎಸ್.ನಿಜಲಿಂಗಪ್ಪನವರ ಆಚಾರ-ವಿಚಾರಗಳನ್ನು ಪಠ್ಯದಲ್ಲಿ ಸೇರಿಸಿ ಇಂದಿನ ಪೀಳಿಗೆಗೆ ಪರಿಚಯಿಸಬೇಕು. ಈಗಿನ ರಾಜಕಾರಣಿಗಳಿಗೆ ಎಸ್.ಎನ್.ರವರು ಮಾದರಿಯಾಗಿದ್ದಾರೆಂದರು.

ಎಸ್.ಎನ್.ಮೆಮೋರಿಯಲ್ ಟ್ರಸ್ಟ್‌ನ ಗೌರವ ಕಾರ್ಯದರ್ಶಿ, ರಾಜ್ಯಸಭೆ ಮಾಜಿ ಸದಸ್ಯ ಹೆಚ್.ಹನುಮಂತಪ್ಪ ಮಾತನಾಡಿ ಎಸ್.



ಎನ್.ರವರ ವ್ಯಕ್ತಿತ್ವ ದೊಡ್ಡದು. ಪಾರದರ್ಶಕ ರಾಜಕಾರಣಿ, ಭ್ರಷ್ಟಾಚಾರದಿಂದ ದೂರವಿದ್ದರು. ವಕೀಲ ವೃತ್ತಿಯಿಂದ ಗಳಿಸಿದ ಸಂಪಾದನೆಯಲ್ಲಿ ಕಟ್ಟಿಸಿಕೊಂಡ ನಿವಾಸದಲ್ಲಿಯೇ ಕೊನೆಯವರೆಗೂ ಜೀವಿಸಿದರು. ಸರ್ಕಾರದ ಬಂಗಲೆ ಪಡೆದುಕೊಳ್ಳಲಿಲ್ಲ. ಚಿಕ್ಕಂದಿನಲ್ಲಿ ಸಾಕಷ್ಟು ಬಡತನ ಅನುಭವಿಸಿದವರು. ಅವರೊಬ್ಬ ಅಪರೂಪದ ರಾಜಕಾರಣಿಯಾಗಿದ್ದರೆಂದು ಗುಣಗಾನ ಮಾಡಿದರು.ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ, ಛಲವಾದಿ ಗುರುಪೀಠದ ಬಸವನಾಗಿದೇವಸ್ವಾಮಿ ಸಾನಿಧ್ಯ ವಹಿಸಿದ್ದರು. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಕೆ.ಪಾಪಯ್ಯ ವೇದಿಕೆಯಲ್ಲಿದ್ದರು.

ಎಸ್.ಎನ್.ಮೆಮೋರಿಯಲ್ ಟ್ರಸ್ಟ್‌ನ ಟ್ರಸ್ಟಿ ಎಸ್.ಷಣ್ಮುಖಪ್ಪ, ಶಾರದ ಬ್ರಾಸ್ ಬ್ಯಾಂಡ್‌ನ ಗುರುಮೂರ್ತಿ, ರೊ. ಎಸ್.ವೀರೇಶ್, ಬಸವೇಶ್ವರ ವಿದ್ಯಾಸಂಸ್ಥೆಯ ಕೆ.ವಿ.ಶಂಕರಪ್ಪ ಎಂ.ವಿ.ಎಂ.ಸ್ವಾಮಿ, ರುದ್ರೇಶ್, ಲೋಕನಾಥ್, ರುದ್ರಮೂರ್ತಿ, ಮಂಜುನಾಥ್, ರೊ.ವೀರಭದ್ರಸ್ವಾಮಿ, ಇಟಗಿ ಜಯದೇವಮೂರ್ತಿ, ಮುರುಗೇಶ್ ಡಿ.ವಿ. ಅನಿತ ಮುರುಗೇಶ್ ಇನ್ನು ಅನೇಕರು ಎಸ್. ಎನ್.ಜನ್ಮದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.



**ದಾವಣಗೆರೆಯಲ್ಲಿ ಇದೇ ಎಂಟನೇ ತಾರೀಖಿನಂದು ಕರ್ನಾಟಕ ಒಕಿನವ ರಿಯೊ ಶೋರಿನ ಸಂಸ್ಥೆ ಆಯೋಜಿಸಿದ್ದ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ದಾವಣಗೆರೆ ವಿದ್ಯಾನಗರದ ಡ್ರ್ಯಾಗನ್ ವಾರಿಯರ್ಸ್ ಮಾರ್ಷಲ್ ಕರಾಟೆ ವಿದ್ಯಾರ್ಥಿಗಳಾದ ಗಗನ್ ರಾಜ್, ವಿಸ್ಮಯ, ಹಾಗೂ ಸುಕೃತಾ ಅವರುಗಳು, ಆಯಾ ವಯೋ ವಿಭಾಗದಲ್ಲಿ ಪ್ರಥಮ ಬಹುಮಾನ ಪಡೆದುಕೊಂಡಿದ್ದಾರೆ... ಇಂದು ಬೆಳಗ್ಗೆ ವಿದ್ಯಾನಗರ ವಾಯುವಿಹಾರ ಬಳಗದಿಂದ ಬಹುಮಾನಿತ ಮಕ್ಕಳನ್ನು ಅಭಿನಂದಿಸಲಾಯಿತು... ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರು ಲೇಖಕರೂ ಆದ ಬಾ.ಮ. ಬಸವರಾಜಯ್ಯ, ಪೋಷಕರು ಉಪಸ್ಥಿತರಿದ್ದರು...**

### ಒತ್ತಡ ನಿರ್ವಹಣೆ ಮತ್ತು ವೃತ್ತಿ ತರಬೇತಿ ಕಾರ್ಯಾಗಾರ



» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಸುಲ್ತಾನಿಪುರ ಪಿಚ್ಚಾರಹಟ್ಟಿ ಸಮುದಾಯ ಭವನದಲ್ಲಿ ಮಂಗಳವಾರ ಜನ ಶಿಕ್ಷಣ ಸಂಸ್ಥೆಯ ಸಹಯೋಗದೊಂದಿಗೆ ಒತ್ತಡ ನಿರ್ವಹಣೆ ಮತ್ತು ವೃತ್ತಿ ತರಬೇತಿ ಕಾರ್ಯಾಗಾರ ನಡೆಯಿತು.

ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಪಿ.ಶರೀಫ್ ಅವರು, ಒತ್ತಡ ನಿರ್ವಹಣೆಯ ಬಗ್ಗೆ ಕುಟುಂಬದಲ್ಲಿ ತಾಳ್ಮೆ ತುಂಬಾ ಮುಖ್ಯ. ಯಾವುದೇ ಒಂದು ವಿಷಯದಲ್ಲೂ ಜವಾಬ್ದಾರಿ ತೆಗೆದುಕೊಳ್ಳುವ ಮೊದಲು ಹಿಡಿ ಕುಟುಂಬದವರು ಕುಳಿತು ಚರ್ಚಿಸಿ, ನಂತರದಲ್ಲಿ ಒಳ್ಳೆಯ ವಿಷಯ ಅಥವಾ ಅಭಿಪ್ರಾಯ ತಿಳಿಸಬೇಕು ಎಂದರು.

ಕುಟುಂಬದಲ್ಲಿ ಸರ್ವರು ಸಮಾನರಾಗಿರಬೇಕು. ಸಣ್ಣ ಸಣ್ಣ ವಿಷಯಗಳಿಗೆ ಜಗಳವಾದದಂತೆ ಸಮಾಧಾನದಿಂದ ವಿಷಯ ಮನ್ನಣೆ ಮಾಡಬೇಕು ಎಂದು ಹೇಳಿದರು. ವಕೀಲೆ ಶಕೀಲಾ ಬಾನು ಅವರು, ಸಖಿ ಒನ್ ಸ್ಟಾಪ್ ಸೆಂಟರ್‌ನ ಕಾರ್ಯವೈಖರಿ ಮತ್ತು ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ ಬಗ್ಗೆ ಮಾಹಿತಿ ನೀಡಿದರು.

ಜನ ಶಿಕ್ಷಣ ಸಂಸ್ಥೆಯ ಕಾರ್ಯಕ್ರಮ ಸಂಯೋಜಕಿ ಶೃತಿ ಮಾತನಾಡಿ, ಕೌಶಲ್ಯ ತರಬೇತಿ ಮತ್ತು ವೃತ್ತಿ ತರಬೇತಿ ಪಡೆಯುವುದು ತುಂಬಾ ಮುಖ್ಯವಾಗಿದೆ. ಸರ್ಕಾರದಿಂದ ತರಬೇತಿ ಪಡೆದ ನಂತರ ಸರ್ಟಿಫಿಕೇಟ್ ಅನ್ನು ವಿತರಿಸಲಾಗುವುದು. ಇದರಿಂದ ಮುಂದಿನ ದಿನಗಳಲ್ಲಿ ಇಲಾಖೆಗಳಿಂದ ಸಬ್ಸಿಡಿ ಅಥವಾ ಸಹಾಯಧನ ಪಡೆದು ವೃತ್ತಿಯನ್ನು ನಿರ್ವಹಿಸಿಕೊಂಡು ಹೋಗಬಹುದು ಎಂದು ತಿಳಿಸಿದರು.

ಮಹಿಳಾ ಸಬಲೀಕರಣ ಘಟಕದ ಜಂಡರ್ ಸ್ಪೆಷಲಿಸ್ಟ್ ಟಿ.ಗೀತಾ ಮಾತನಾಡಿ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಮತ್ತು ಜಿಲ್ಲೆಯಲ್ಲಿ ಶಕ್ತಿ ಸದನ ಸಖಿನಿವಾಸ್ ಇವುಗಳ ಕಾರ್ಯವೈಖರಿಗಳ ಬಗ್ಗೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಇರುವ ಮಹಿಳಾಧಾರಿತ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ನಂತರದಲ್ಲಿ ವೃತ್ತಿ ತರಬೇತಿಯನ್ನು ಪಡೆದ ಅಭ್ಯರ್ಥಿಗಳಿಗೆ ಸರ್ಟಿಫಿಕೇಟ್ ವಿತರಿಸಲಾಯಿತು.ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ ರುದ್ರಮ್ಮ, ಗ್ರಾಮಸ್ಥರು ಇದ್ದರು.

## ಪ್ರಮುಖ ಸುದ್ದಿ

### ಸೂರ್ಯ ಘರ್ ಬಿಜಲಿ ಯೋಜನೆಯ ಸದುಪಯೋಗ ಪಡೆದುಕೊಳ್ಳಿ

# ವಿದ್ಯುತ್ ಬಿಲ್ ಉಳಿತಾಯ ಮಾಡಿ; ಡಿಸಿ ಗಂಗಾಧರಸ್ವಾಮಿ

» **ದಾವಣಗೆರೆ**

ಸೋಲಾರ್ ರೂಫ್ ಟಾಪ್ ಅಳವಡಿಸುವ ಮೂಲಕ ಉಚಿತ ವಿದ್ಯುತ್ ಸೌಲಭ್ಯ ಪಡೆದುಕೊಳ್ಳಲು ಸರ್ಕಾರ ಪಿಎಂ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ ರೂಪಿಸಿದೆ. ಗ್ರಾಹಕರು ಯೋಜನೆಗೆ ನೊಂದಾಯಿಸಿಕೊಂಡು ಮನೆಯಲ್ಲಿ ಉಚಿತ ವಿದ್ಯುತ್ ಪಡೆದು ಖರ್ಚು ಕಡಿಮೆ ಮಾಡಿಕೊಳ್ಳಬಹುದೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಪಿಎಂ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆಯ ಕುರಿತಂತೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಯೋಜನೆ ಅಡಿಯಲ್ಲಿ ಸೌರ ಫಲಕಗಳನ್ನು ಸ್ಥಾಪಿಸಲು, ಮಾನದಂಡ ವೆಚ್ಚದ ಶೇ.60% ರಷ್ಟು ಸಹಾಯಧನ ರೂಪದಲ್ಲಿ ಒದಗಿಸಲಾಗುತ್ತದೆ. 1ಕಿಲೋವ್ಯಾಟ್‌ಗೆ



ರೂ.30 ಸಾವಿರ ರೂಪಾಯಿ, 2 ಕಿಲೋವ್ಯಾಟ್‌ಗೆ ರೂ.60 ಸಾವಿರ ರೂಪಾಯಿ ಮತ್ತು 3 ಕಿಲೋವ್ಯಾಟ್‌ಗೆ ರೂ.78 ಸಾವಿರ ರೂಪಾಯಿ ಸಹಾಯಧನ ನೀಡಲಾಗುವುದು, ತಮಗೆ ಸಾಕಾಗುವಷ್ಟು ವಿದ್ಯುತ್ ಬಳಸಿದ ಮೇಲೆ ವಿದ್ಯುತ್‌ನ್ನು ಬೆಸ್ಕಾಂಗೆ ಮಾರಾಟ ಮಾಡಲು ಅವಕಾಶ ಇದೆ. ಈ ಯೋಜನೆಯ ಲಾಭ ಪಡೆಯಲು ಯಾವುದೇ ಆರ್ಥಿಕ ಮಿತಿ ಇರುವುದಿಲ್ಲ. ಎಲ್ಲಾ ವರ್ಗದ ಗ್ರಾಹಕರು ನೊಂದಣಿ ಮಾಡಿಕೊಳ್ಳಬಹುದಾಗಿದೆ. ತಮ್ಮ ಮನೆ ಆರ್‌ಸಿಸಿ ಹೊಂದಿ ಕನಿಷ್ಠ 10/10 ಸ್ಥಳಾವಕಾಶ ಇದ್ದಲ್ಲಿ ಆಧಾರ್ ಕಾರ್ಡ್, ವಿದ್ಯುತ್ ಬಿಲ್, ಫೋಟೋದೊಂದಿಗೆ pmsuryaghar.gov.in ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳಬಹುದು, ರೂ.1500 ನೊಂದಣಿ ಶುಲ್ಕವಿರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ತಿಪ್ಪೇಸ್ವಾಮಿ ಎ.ಕೆ ಹಾಗೂ ವಿವಿಧ ಸಿಬ್ಬಂದಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T